• ಮಂಡ್ಯ • ಮೈಸೂರು • ಚಾಮರಾಜನಗರ • ಹಾಸನ • ರಾಮನಗರ • ತುಮಕೂರು • ಬೆಂಗಳೂರು ಗ್ರಾಮಾಂತರ • ಬೆಂಗಳೂರು ನಗರ

ಕಾಯಕ ಯೋಗಿ

ಸಂಪಾದಕರು: ಅರುಣಜ್ಯೋತಿ ಬಿ.ಕೆ. KAYAKA YOGI- Regional Daily ಪ್ರಾದೇಶಿಕ ದಿನಪತ್ರಿಕೆ

RNI NO.KARKAN/2018/77805 | POST NO.KA/SK/MND/999/2022-2024 | ಮಂಡ್ಯ MONDYA | ಸಂಪುಟ VOLUME 07 | ಸಂಚಿಕೆ ISSUE 54 | ಬುಧವಾರ WEDNESDAY | 05-06-2024 | ಪುಟಗಳು Pages 06 | ಬೆಲೆ Rates 02 | ಸಂಪರ್ಕ 9980605484

ಕಾಯಕಯೋಗಿ ಸುದ್ದಿ

ಬೆಂಗಳೂರು: ಲೋಕಸಭಾ ಚುನಾವಣೆಯ ಆರಂಭದಲ್ಲಿ 'ಅಬ್ಕಿ ಬಾರ್ 400 ಸೌ ಪಾರ್' ಎಂಬ ಘೋಷಣೆ ಕೂಗಿದ್ದ ಮೋದಿ ಅವರು, ಈಗ ಮೂರನೇ ಭಾರಿಗೆ ಪ್ರಧಾನಿ ಆಗುವುದೇ ಕಷ್ಟವಾಗಿದೆ. ಬಿಜೆಪಿ ನೇತೃತ್ವದ ಎನ್‌ಡಿಎ 296 ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿದೆ. ಅಂದಹಾಗೆ, ಈ ಪೈಕಿ ಬಿಜೆಪಿ 241 ಸ್ಥಾನಗಳಲ್ಲಿ ಮುನ್ನಡೆಯಲ್ಲಿದ್ದು, 400 ಸ್ಥಾನಗಳಿಗೆ ಬರೋಬ್ಬರಿ 159 ಸ್ಥಾನಗಳ ಅಗತ್ಯವಿದ್ದು, ಬಿಜೆಪಿ ಭಾರೀ ಮುಖಭಂಗವಾಗಿದೆ.

ಅಲ್ಲದೆ, ಬಿಜೆಪಿ ಈ ಬಾರಿ 241 ಸ್ಥಾನಗಳಲ್ಲಿ ಗೆದ್ದರೂ, 2019ರಲ್ಲಿ ಗೆದ್ದಿದ್ದ 303 ಸ್ಥಾನಗಳಿಗೆ ಹೋಲಿಸಿದರೆ, 58 ಸ್ಥಾನಗಳನ್ನು ಕಳೆದುಕೊಳ್ಳಲಿದೆ. ಆದರೆ, ಬಿಜೆಪಿ ಮತ್ತು ಎನ್‌ಡಿಎ ಇನ್ನೂ ಹಲವು ಕ್ಷೇತ್ರಗಳಲ್ಲಿ ಹಿನ್ನಡೆ ಅನುಭವಿಸಲಿದೆ ಎಂದು ಹೇಳಲಾಗುತ್ತಿದೆ.

ಸದ್ಯ, 542 ಸ್ಥಾನಗಳ ಪೈಕಿ ಎನ್‌ಡಿಎ 296 ಕ್ಷೇತ್ರ ಮತ್ತು 'ಇಂಡಿಯಾ' ಒಕ್ಕೂಟ 230 ಸ್ಥಾನಗಳಲ್ಲಿ ಮುನ್ನಡೆಯಲ್ಲಿವೆ. ಕಾಂಗ್ರೆಸ್ ಮತ್ತು ಮೈತ್ರಿ ಪಕ್ಷಗಳು ತಮ್ಮ ಸ್ಥಾನಗಳನ್ನು ವೃದ್ಧಿಸಿಕೊಳ್ಳುತ್ತಿವೆ. ಇದು ಬಿಜೆಪಿಯಲ್ಲಿ ಆಂತಕ ಸೃಷ್ಟಿಸಿದೆ.

ಮಾತ್ರವಲ್ಲದೆ, ಕಾಂಗ್ರೆಸ್ ನಾಯಕರು ಬಿಹಾರದ ಜೆಡಿಯು ನಾಯಕ ನಿತೀಶ್ ಕುಮಾರ್ ಮತ್ತು ಆಂಧ್ರಪ್ರದೇಶದ ಟಿಡಿಎಂ ನಾಯಕ ಚಂದ್ರಬಾಬು ನಾಯ್ಡು ಜೊತೆ ಮಾತುಕತೆ ನಡೆಸುತ್ತಿದ್ದಾರೆ ಎಂದು ತಿಳಿದುಬಂದಿದೆ. ಸದ್ಯ, ಈ ಎರಡೂ ಪಕ್ಷಗಳು ಎನ್‌ಡಿಎ ಭಾಗವಾಗಿದ್ದು, ಅವರು ಬಿಜೆಪಿ ಜೊತೆಗಿನ ಸಖ್ಯ ತೊರೆದರೆ, ಬಿಜೆಪಿಗೆ ಭಾರೀ ಹಿನ್ನಡೆಯಾಗಲಿದೆ. ಅಂತೆಯೇ 'ಇಂಡಿಯಾ' ಮೈತ್ರಿಕೂಟಕ್ಕೆ ಮತ್ತಷ್ಟು ಬಲ ಬರಲಿದ್ದು, ನಿರಾಯಾಸವಾಗಿ ಸರ್ಕಾರ ರಚಿಸಲು ಸಾಧ್ಯವಾಗುತ್ತದೆ ಎನ್ನಲಾಗಿದೆ.

ಕೀಲಿಕೈ :

ಎಕ್ಸಿಟ್ ಪೋಲ್‌ನ್ನೇ ಎಕ್ಸಾಟ್ ಪೋಲ್ ಎಂದು ಸಂಭ್ರಮದಲ್ಲಿ ನಿರತಾವಗಿದ್ದ ಬಿಜೆಪಿ ಪಕ್ಷಕ್ಕೆ ಬಿಗ್ ಶಾಕ್ ಕಾದಿದೆ. 300 ನಂಬರ್ ರೀಚ್ ಆಗುವ ಕನಸು ನನಸಾಗುವ ಸಾಧ್ಯತೆ ತೀರಾ ಕಡಿಮೆ ಇದೆ. ಹೀಗಾಗಿ ಈ ಬಾರಿ ಬಿಜೆಪಿ ಕೇಂದ್ರದಲ್ಲಿ ಸ್ವಂತ ಬಲದಲ್ಲಿ ಸರ್ಕಾರ ನಡೆಸುವುದು ದುಸ್ತರವಾಗಲಿದೆ.

ಕೇಂದ್ರದಲ್ಲಿ ಮೂರನೇ ಬಾರಿಗೆ ಬಿಜೆಪಿ ನೇತೃತ್ವದ ಮೋದಿ ಸರ್ಕಾರ ರಚನೆ ಆಗುತ್ತದೆ ಎಂದು ಕನಸು ಕಾಣುತ್ತಿದ್ದ ಬಿಜೆಪಿಗೆ ಆಘಾತವಾಗಿದೆ. ಬಿಜೆಪಿ ಒಂದೇ ಮ್ಯಾಜಿಕ್ ನಂಬರ್ ದಾಟುತ್ತದೆ ಎಂದು ನಂಬಿಕೆ ಇಟ್ಟುಕೊಂಡಿತ್ತು. ಆದರೆ ಅದರ ಆಸೆ ಕಮರಿದೆ. ಈಗ ಎನ್‌ಡಿಎ ಮೈತ್ರಿಕೂಟಗಳೊಂದಿಗೆ ಸರ್ಕಾರ ರಚಿಸಬಹುದು. ಆದರೆ ಈ ಚಾನ್ಸ್‌ಗಳಿಗೆ ಬ್ರೇಕ್ ಹಾಕಲು ಕಾಂಗ್ರೆಸ್ ಪ್ಲಾನ್ ಮಾಡಿಕೊಂಡಿದೆ.

ಮೋದಿ ಸರ್ಕಾರ ರಚನೆ ಕಗ್ಗಂಟು
ಜೆಡಿಯು-ಟಿಡಿಪಿ ಕೈಯಲ್ಲಿ 'ಕೀ'






ಬಿಜೆಪಿ ತನ್ನ ಮೈತ್ರಿ ಪಕ್ಷಗಳನ್ನು ಹೊಂದಾಣಿಕೆ ಮಾಡಿಕೊಂಡು ಸರ್ಕಾರ ರಚಿಸುವ ಸಾಧ್ಯತೆ ಇದೆ. ಇನ್ನು ಕಳೆದ ಹತ್ತು ವರ್ಷಗಳಿಂದ ಅಧಿಕಾರದಿಂದ ದೂರ ಉಳಿದಿರುವ ಕಾಂಗ್ರೆಸ್ ಶತಾಯಗತಾಯ ಗದ್ದುಗೆ ಏರಲು ಪ್ಲಾನ್ ಮಾಡಿಕೊಂಡಿದೆ. ಇದಕ್ಕಾಗಿ ಭರ್ಜರಿ ಪ್ಲಾನ್ ಮಾಡಿಕೊಳ್ಳಲಿದೆ. ಚಂದ್ರ ಬಾಬು, ನಿತೀಶ್ ಕಿಂಗ್ ಮೇಕರ್ಸ್ ಚುನಾವಣೆ ಆರಂಭಕ್ಕೂ ಮುನ್ನ ನಡೆದ ಮೈತ್ರಿಯಲ್ಲಿ ಟಿಡಿಪಿ ಮುಖ್ಯಸ್ಥ ಚಂದ್ರಬಾಬು ನಾಯ್ಡು ಹಾಗೂ ಜೆಡಿಯು ಮುಖ್ಯಸ್ಥ ನಿತೀಶ್ ಕುಮಾರ್ ಅವರ ಮೇಲೆ ಎಲ್ಲರ ಕಣ್ಣು ನೆಟ್ಟಿದೆ.

ಗೆಲುವಿನ ನಗೆ ಬೀರಿದ ಮೋದಿ




ದೆಹಲಿ: ಪ್ರಧಾನಿ ನರೇಂದ್ರ ಮೋದಿ ಅವರು ಉತ್ತರ ಪ್ರದೇಶದ ವಾರಣಾಸಿ ಕ್ಷೇತ್ರದಲ್ಲಿ 1.52 ಲಕ್ಷ ಮತಗಳಿಂದ ಗೆದ್ದಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರು ಉತ್ತರ ಪ್ರದೇಶದ ವಾರಣಾಸಿ ಕ್ಷೇತ್ರದಿಂದ ಕಾಂಗ್ರೆಸ್‌ನ ಅಜಯ್ ರೈ ಅವರನ್ನು 152513 ಮತಗಳಿಂದ ಸೋಲಿಸಿದ್ದಾರೆ. ಮೋದಿ ಅವರು 612970 ಮತಗಳನ್ನು ಪಡೆದರು. ಮತ್ತು ರೈ ಅವರು 460457 ಮತಗಳನ್ನು ಪಡೆದಿದ್ದಾರೆ ಎಂದು ಭಾರತೀಯ ಚುನಾವಣಾ ಆಯೋಗದ ಅಧಿಕಾರಿಗಳು ತಿಳಿಸಿದ್ದಾರೆ.

ಕಾಶಿ ಲೋಕಸಭಾ ಕ್ಷೇತ್ರ ಎಂದು ಕರೆಯಲ್ಪಡುವ ವಾರಣಾಸಿಯಿಂದ ಬಿಜೆಪಿ ಅಭ್ಯರ್ಥಿ ಮತ್ತು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಕಾಂಗ್ರೆಸ್‌ನ ಅಜಯ್ ರೈ ಸ್ಪರ್ಧಿಸಿದ್ದರು. ಪ್ರಧಾನಿ ಮಂತ್ರಿಗಳಿಗೆ ಕಾಂಗ್ರೆಸ್ ಅಭ್ಯರ್ಥಿಯೂ ಕೊನೆಯವರೆಗೆ ತೀವ್ರ ಪೈಪೋಟಿ ನೀಡಿದರು.

ತುಮಕೂರು

ಸೋಲು	ಗೆಲುವು
	
ಕಾಂಗ್ರೆಸ್	ಬಿಜೆಪಿ
545352	720946

ಬೆಂಗಳೂರು ಗ್ರಾಮಾಂತರ

ಸೋಲು	ಗೆಲುವು
	
ಕಾಂಗ್ರೆಸ್	ಬಿಜೆಪಿ
807459	1075553

ಚಿತ್ರದುರ್ಗ

ಸೋಲು	ಗೆಲುವು
	
ಕಾಂಗ್ರೆಸ್	ಬಿಜೆಪಿ
636769	684890

ಬಳ್ಳಾರಿ

ಸೋಲು	ಗೆಲುವು
	
ಬಿಜೆಪಿ	ಕಾಂಗ್ರೆಸ್
631853	730845


ಬಾಗಲಕೋಟೆ

ಸೋಲು	ಗೆಲುವು
	
ಕಾಂಗ್ರೆಸ್	ಬಿಜೆಪಿ
545352	671039

ಬೆಂಗಳೂರು ಕೇಂದ್ರ

ಸೋಲು	ಗೆಲುವು
	
ಕಾಂಗ್ರೆಸ್	ಬಿಜೆಪಿ
626208	658915

ಬೆಂಗಳೂರು ಉತ್ತರ

ಸೋಲು	ಗೆಲುವು
	
ಕಾಂಗ್ರೆಸ್	ಬಿಜೆಪಿ
726573	986049

ಬೆಂಗಳೂರು ದಕ್ಷಿಣ

ಸೋಲು	ಗೆಲುವು
	
ಕಾಂಗ್ರೆಸ್	ಬಿಜೆಪಿ
469965	741262


ಬೆಳಗಾಂವಿ

ಸೋಲು	ಗೆಲುವು
	
ಕಾಂಗ್ರೆಸ್	ಬಿಜೆಪಿ
561589	730576


ಬೀದರ

ಸೋಲು	ಗೆಲುವು
	
ಬಿಜೆಪಿ	ಕಾಂಗ್ರೆಸ್
537442	666317

ವಿಜಯಪುರ

ಸೋಲು	ಗೆಲುವು
	
ಕಾಂಗ್ರೆಸ್	ಬಿಜೆಪಿ
595552	672781


ಚಾಮರಾಜನಗರ

ಸೋಲು	ಗೆಲುವು
	
ಬಿಜೆಪಿ	ಕಾಂಗ್ರೆಸ್
562965	751671

ಚಿಕ್ಕಬಳ್ಳಾಪೂರ

ಸೋಲು	ಗೆಲುವು
	
ಕಾಂಗ್ರೆಸ್	ಬಿಜೆಪಿ
659159	822619

ಚಿಕ್ಕೋಡಿ

ಸೋಲು	ಗೆಲುವು
	
ಬಿಜೆಪಿ	ಕಾಂಗ್ರೆಸ್
618168	710823


ದಕ್ಷಿಣ ಕನ್ನಡ

ಸೋಲು	ಗೆಲುವು
	
ಕಾಂಗ್ರೆಸ್	ಬಿಜೆಪಿ
614924	764132

ದಾವಣಗೆರೆ

ಸೋಲು	ಗೆಲುವು
	
ಬಿಜೆಪಿ	ಕಾಂಗ್ರೆಸ್
606965	633059

ಧಾರವಾಡ

ಸೋಲು	ಗೆಲುವು
	
ಕಾಂಗ್ರೆಸ್	ಬಿಜೆಪಿ
618907	716231

ಗುಲ್ಬರ್ಗ

ಸೋಲು	ಗೆಲುವು
	
ಬಿಜೆಪಿ	ಕಾಂಗ್ರೆಸ್
625116	652321

ಹಾಸನ

ಸೋಲು	ಗೆಲುವು
ಜೆಡಿಎಸ್	ಕಾಂಗ್ರೆಸ್
630339	672988

ಹಾವೇರಿ

ಸೋಲು	ಗೆಲುವು
ಕಾಂಗ್ರೆಸ್	ಬಿಜೆಪಿ
662025	705538

ಕೋಲಾರ

ಸೋಲು	ಗೆಲುವು
ಕಾಂಗ್ರೆಸ್	ಜೆಡಿಎಸ್
620093	691481

ಕೊಪ್ಪಳ

ಸೋಲು	ಗೆಲುವು
ಬಿಜೆಪಿ	ಕಾಂಗ್ರೆಸ್
617154	663511

ಮಂಡ್ಯ

ಸೋಲು	ಗೆಲುವು
ಕಾಂಗ್ರೆಸ್	ಜೆಡಿಎಸ್
567261	851881

ಮೈಸೂರು

ಸೋಲು	ಗೆಲುವು
ಕಾಂಗ್ರೆಸ್	ಬಿಜೆಪಿ
656241	795503

ರಾಯಚೂರು

ಸೋಲು	ಗೆಲುವು
ಬಿಜೆಪಿ	ಕಾಂಗ್ರೆಸ್
591185	670966

ಶಿವಮೊಗ್ಗ

ಸೋಲು	ಗೆಲುವು
ಕಾಂಗ್ರೆಸ್	ಬಿಜೆಪಿ
535006	778721

ಉಡುಪಿ - ಚಿಕ್ಕಮಗಳೂರು

ಸೋಲು	ಗೆಲುವು
ಕಾಂಗ್ರೆಸ್	ಬಿಜೆಪಿ
473059	732234

ಉತ್ತರಕನ್ನಡ

ಸೋಲು	ಗೆಲುವು
ಕಾಂಗ್ರೆಸ್	ಬಿಜೆಪಿ
631853	782495

ಮಂಡ್ಯ ಲೋಕಸಭಾ ಚುನವಾಣೆಯಲ್ಲಿ ಭಾರಿ ಅಂತರದಲ್ಲಿ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಜಯಭೇರಿ ಬಾರಿಸಿದ್ದಾರೆ. ಶಾಸಕ ಬಂಡ್ಯಪ್ಪ ಕಾಂಶಪೂರ ಕುಮಾರಸ್ವಾಮಿಗೆ ಸಿಹಿ ತಿನ್ನಿಸುವ ಮೂಲಕ ವಿಜಯೋತ್ಸವ ಆಚರಿಸಿದರು.

ಕಾಯಕಯೋಗಿ

05–06–2024
ಬುಧವಾರ



ಮಂಡ್ಯ:ನಗರದವಿವಿರಸ್ತೆಯಲ್ಲರುವಶ್ರೀಜಗಜ್ಯೋತಿಬಸವೇಶ್ವರರಪತ್ತಿನಸೌಹಾರ್ದನಿಯಮಿತಸಂಘದ ಅಧ್ಯಕ್ಷರಾದ ಹಾಗೂ ಸಹಕಾರಿ ಕ್ಷೇತ್ರದ ರಾಜ್ಯ ಪ್ರಶಸ್ತಿ ಪುರಸ್ಕೃತರಾದ ಎಸ್. ನಾಗರಾಜುರವರು ತಮ್ಮ 63ನೇ ವರ್ಷದ ಹುಟ್ಟುಹಬ್ಬವನ್ನು ಸಂಘದ ಕಚೇರಿಯಲ್ಲಿ ಸಡಗರ ಸಂಭ್ರಮದಿಂದ ಆಚರಿಸಿಕೊಂಡರು. ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ಡಿ. ದ್ಯಾವಣ್ಣ, ನಿರ್ದೇಶಕರುಗಳಾದ ಎಸ್.ಆರ್. ಶಿವಕುಮಾರಸ್ವಾಮಿ, ಹೆಚ್. ಸಿ. ಶಿವಕುಮಾರ್, ಬಿ. ಎಂ. ಮಹಾದೇವಸ್ವಾಮಿ, ಎನ್. ಎಸ್. ನವೀನ್, ಹೊನ್ನಮ್ಮ, ನವೀನ್, ಎಂ. ಮಹದೇವಯ್ಯ, ಶಕುಂತಲಾ, ಎಸ್. ಪಿ. ಉಮೇಶ್, ಮುಖಂಡರುಗಳಾದ ರುದ್ರಸ್ವಾಮಿ, ಮಧು, ಮಹೇಶ್, ಮಲ್ಲೇಶ್, ಎ.ಸಿ. ಅಂಗದೇವರು, ಸಿ.ಎಂ. ಪುಟ್ಟಬುದ್ಧಿ, ವಿಶ್ವೇಶ್ವರಯ್ಯ, ಇನ್ನಿತರರಿದ್ದರು.

ಅಕ್ರಮ ಗೋಸಾಗಣೆ: ದೂರು ದಾಖಲು



ಶ್ರೀರಂಗಪಟ್ಟಣ: ಹಿಂದೂ ಜಾಗರಣ ವೇದಿಕೆ ಕಾರ್ಯಕರ್ತ ಪ್ರದೀಪ್ (ಗಿಡ್ಡು) ಮತ್ತು ಕಾರ್ಯಕರ್ತರು ಸೋಮವಾರ ಬೆಳಿಗ್ಗೆ 7ರ ಸಮಯದಲ್ಲಿ ಮೈಸೂರು–ಬೆಂಗಳೂರು ಮುಖ್ಯ ರಸ್ತೆಯಲ್ಲಿ 20 ಕರುಗಳು ತುಂಬಿದ ಅಕ್ರಮ ಗೋಸಾಗಾಣೆ ಮಾಡಿಕೊಂಡು ಕಾರಿನಲ್ಲಿ ಹೋಗುತ್ತಿದ್ದನ್ನು ಪೊಲೀಸ್ ಠಾಣೆಯ ವನ್ ವನ್ ಟು ದೂರವಾಣಿ ಕರೆ ಮುಖಾಂತರ ಗೋ ರಕ್ಷಣೆ ಮಾಡಿ ನಗರ ಪೊಲೀಸ್ ಠಾಣೆಗೆ ತಂದು ಒಪ್ಪಿಸಿದಾರೆ.ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಯಲ್ಲಿ ಅಧಿಕಾರಿಗಳು ಗೋ ಹತ್ಯೆ ನಿಷೇಧ ಕಾಯ್ದೆ 2019 ಅಡಿ ಪ್ರಕರಣವನ್ನು ದಾಖಲಿಸಿಕೊಂಡು, ಗೋವು ಸಾಗಿಸುತ್ತಿದ್ದ ರಿಟ್ಜ್ (ಏಂ 11,ಒ 4593) ಬಿಳಿ ಬಣ್ಣದ ಕಾರನ್ನು ಮುಟ್ಟುಗೋಲು ಮಾಡಿಕೊಂಡು, ವಿಚಾರಣೆ ನಡೆಸಿದಾಗ ಆರೋಪಿಯು ಗೋವುಗಳನ್ನು ಮೈಸೂರಿನಿಂದ ಮಂಡ್ಯಕ್ಕೆ ಸಾಗಿಸುತ್ತಿದ್ದುದಾಗಿ ತಿಳಿಸಿರುತಾನೆ.



ಮಂಡ್ಯ: ಬೆಂಗಾಡಾಗಿದ್ದ ಮಂಡ್ಯ ಪ್ರದೇಶವನ್ನು ಹಸಿರಾಗಿಸಿ, ಜಿಲ್ಲೆಯ ಜನತೆಗೆ ಅನ್ನ ಕೊಟ್ಟ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಾತಃಸ್ಮರಣೀಯರು ಎಂದು ಜಿಲ್ಲಾ ಜಾಗೃತ ಅಂಕಣಕಾರರ ವೇದಿಕೆ ಅಧ್ಯಕ್ಷಪ್ರೊ.ಸಿದ್ದರಾಜು ಆಲಕೆರೆ ಹೇಳಿದರು. ನಗರದ ಗಾಂಧಿ ಭವನದಲ್ಲಿ ಜಿಲ್ಲಾ ಜಾಗೃತ ಅಂಕಣಕಾರರ ವೇದಿಕೆ ವತಿಯಿಂದ ಏರ್ಪಡಿಸಿದ್ದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಒಡೆಯರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು. ಕಾರ್ಯಕ್ರಮದಲ್ಲಿ ಗಾಂಧಿ ಭವನದ ಆಂಗಣ್ಣ ಬಂಧುಕಾರ್, ಕೆಂಪೇಗೌಡ, ಕಾರಸವಾಡಿ ಶಿವರಾಮು ಹಾಗೂ ಗಾಂಧಿ ಸ್ಮಾರಕದ ಹೊಲಗೆತರಬೇತಿ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು. ಬಳಿಕ ಎಲ್ಲರಿಗೂ ಸಿಹಿ ವಿತರಿಸಲಾಯಿತು.

ಸಕ್ಕರೆ ನಾಡಿನಲ್ಲಿ 'ಕಮಲೋದ್ಭವ': ಜೆಡಿಎಸ್‌ಗೆ ಮರುಜೀವ: ಕಾಂಗ್ರೆಸ್ ಪರಾಭವ

ಮಂಡ್ಯದಲ್ಲಿ ಕುಮಾರಸ್ವಾಮಿ ರೋಚಕ ಗೆಲುವು



ಸೋತ ಅಭ್ಯರ್ಥಿ :
ವೆಂಕಟರಮಣೇಗೌಡ (ಸ್ಟಾರ್‌ಚಂದ್ರು)–
ಕಾಂಗ್ರೆಸ್ – ಪಡೆದ ಮತ : 5,67,261



ಗೆದ್ದ ಅಭ್ಯರ್ಥಿ :
ಎಚ್.ಡಿ.ಕುಮಾರಸ್ವಾಮಿ – ಜೆಡಿಎಸ್ –
ಪಡೆದಮತ : 8,51,881

ಮಂಡ್ಯ: ಜಿಲ್ಲೆಯ ಲೋಕಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ 8 ವಿಧಾನ ಸಭಾ ಕ್ಷೇತ್ರದಲ್ಲಿ 7 ಕ್ಷೇತ್ರದಲ್ಲಿ ಅಧಿಕಾರ ಗದ್ದುಗೆ ಹಿಡಿದಿರುವ ಕಾಂಗ್ರೆಸ್ ಪಕ್ಷದ ಭದ್ರಕೋಟೆಯಲ್ಲಿ ಇದೇ ಪ್ರಥಮಬಾರಿಗೆ ಲೋಕಸಭೆ ಚುನಾವಣೆಯಲ್ಲಿ 'ಕಮಲ' ಅರಳಿದೆ.

ಜೆಡಿಎಸ್ ಭದ್ರಕೋಟೆಯಾಗಿದ್ದ ಮಂಡ್ಯ ಜಿಲ್ಲೆಯಲ್ಲಿ ಹತ್ತುಹಲವು ರಾಜಕೀಯ ಕಾರಣಗಳಿಂದಾಗಿ ವರ್ಚಸ್ಸು ಕಳೆದುಕೊಂಡಿದ್ದ ಜೆಡಿಎಸ್ ಪಕ್ಷಕ್ಕೆ ಮತ್ತೆ ಮಂಡ್ಯ ಜಿಲ್ಲೆಯ ಜನತೆ ಕುಮಾರಸ್ವಾಮಿಯವರನ್ನು ಗೆಲ್ಲಿಸುವ ಮೂಲಕ ಮರುಜೀವ ನೀಡಿದ್ದಾರೆ.

ಎನ್‌ಡಿಎ ಅಭ್ಯರ್ಥಿ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರು ದಾಖಲೆ ಮತಗಳಿಸಿರುವುದಲ್ಲದೆ, ದಾಖಲೆ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಈ ಮೂಲಕ 2019ರ ಲೋಕಸಭೆ ಚುನಾವಣೆಯಲ್ಲಿ ಮಗನ ಸೋಲಿನ ಸೇಡನ್ನು ತೀರಿಸಿಕೊಂಡಿದ್ದಾರೆ.

ಲೋಕಸಭೆಯ ಸಾರ್ವತ್ರಿಕ ಚುನಾವಣೆಯಲ್ಲಿ 'ಹ್ಯಾಟ್ರಿಕ್ ಸಂಸದ' ಎಂದೇ ಹೆಸರಾಗಿದ್ದ 'ರೆಬಲ್‌ಸ್ಟಾರ್' ಅಂಬರೀಶ್ ಹೆಸರಿನಲ್ಲಿದ್ದ ಗರಿಷ್ಠ ಮತಗಳನ್ನು ಅವರ ಪತ್ನಿ ಸುಮಲತಾ ಅವರು 7,03,660 ಮತ ಗಳಿಸಿ ದಾಖಲೆ ನಿರ್ಮಿಸಿದ್ದರು.

1999ರ ಚುನಾವಣೆಯಲ್ಲಿ ಅಂಬರೀಶ್ ಅವರು 4,18,110 ಮತಗಳನ್ನು ಪಡೆದು, 1,52,180 ಮತಗಳ ಭಾರೀ ಅಂತರದಿಂದ ಗೆಲುವು ಸಾಧಿಸಿದ್ದರು. ಆಗ ಜಾ.ದಳ ಅಭ್ಯರ್ಥಿಯಾಗಿದ್ದ ಕೆ.ಆರ್.ಪೇಟೆ ಕೃಷ್ಣ ಅವರು 2,65,930 ಮತಗಳನ್ನಷ್ಟೇ ಪಡೆದಿದ್ದರು. ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಗೆಲುವಿನ ಬಹುದೊಡ್ಡ ಅಂತರ ಹಾಗೂ ಗರಿಷ್ಠ ಮತ ಗಳಿಕೆಯ ಪ್ರಮಾಣ ಇದೇ ಆಗಿತ್ತು. ಹೀಗಾಗಿ ಈ ದಾಖಲೆಯು ದಶಕಗಳ ಅಂಬಿ ಹೆಸರಿನಲ್ಲೇ ಇತ್ತು.

ಆದರೆ, 2018ರ ನವೆಂಬರ್‌ನಲ್ಲಿ ನಡೆದ ಉಪ ಚುನಾವಣೆಯಲ್ಲಿ 5,69,347 ಮತಗಳನ್ನು ಗಾಳಿಸಿದ ಶಿವರಾಮೇಗೌಡ ಅವರು 3,24,943 ಮತಗಳ ಅಂತರದಿಂದ ಗೆಲುವು ಸಾಧಿಸಿ, ಹೊಸ ದಾಖಲೆ ಸೃಷ್ಟಿಸಿದ್ದರು. 2014ರ ಲೋಕಸಭೆ ಸಾರ್ವತ್ರಿಕ ಚುನಾವಣೆಯಲ್ಲಿ ಗೆದ್ದಿದ್ದ ಸಂಸದ ಸಿ.ಎಸ್.ಪುಟ್ಟರಾಜು 5,24,370 ಮತಗಳು ಹಾಗೂ ಪರಾಜಿತ ಕಾಂಗ್ರೆಸ್ ಅಭ್ಯರ್ಥಿ, ಚಿತ್ರನಟಿ ರಮ್ಯಾ ಅವರು 5,18,852 ಮತಗಳನ್ನು ಗಳಿಸಿದ್ದರು. ಪುಟ್ಟರಾಜು ಗಳಿಸಿದ್ದ ಮತಗಳೇ ಈವರೆಗಿನ ಗರಿಷ್ಠ ಮತಗಳಾಗಿತ್ತು. ಅವರ ದಾಖಲೆಯನ್ನೂ ಶಿವರಾಮೇಗೌಡರು ಮುರಿದಿದ್ದರು.

2019ರ ಲೋಕಸಭೆ ಸಾರ್ವತ್ರಿಕ ಚುನಾವಣೆಯಲ್ಲಿ ಸುಮಲತಾ ಅವರು 7,03,660 ಮತಗಳನ್ನು ಪಡೆದರು. 16ನೇ ಸುತ್ತಿನ ಮತ ಎಣಿಕೆಯಲ್ಲೇ ಸುಮಲತಾ ಅವರು 5,82,299 ಮತಗಳನ್ನು ಪಡೆಯುವ ಮೂಲಕ ಶಿವರಾಮೇಗೌಡರ ದಾಖಲೆಯನ್ನು ಸರಿಗಟ್ಟಿದರು. ಜೊತೆಗೆ, 88,099 ಮತಗಳ ಅಂತರದಲ್ಲಿ ಮುನ್ನಡೆಯನ್ನೂ ಸಾಧಿಸಿದ್ದರು. ಈ ಸುತ್ತಿನಲ್ಲಿ ಜಾ.ದಳ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಅವರು 4,94,200 ಮತಗಳನ್ನು ಪಡೆದಿದ್ದರು.

ಬರೋಬ್ಬರಿ 8,51,881 ಮತಗಳನ್ನು ಗಳಿಸಿ ಭರ್ಜರಿ ಜಯ ಸಾಧಿಸಿದ ಎಚ್.ಡಿ. ಕುಮಾರಸ್ವಾಮಿ ಅವರು ಪ್ರತಿಸ್ಪರ್ಧಿ ಕಾಂಗ್ರೆಸ್‌ನ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಅವರನ್ನು 2,84,620 ಮತಗಳ ಅಂತರದಲ್ಲಿ ಪರಾಭವಗೊಳಿಸಿ ಮಂಡ್ಯ ಲೋಕಸಭಾ ಕ್ಷೇತ್ರದಿಂದ ಮೊದಲ ಬಾರಿಗೆ ಲೋಕಸಭೆ ಪ್ರವೇಶಿಸಿದ್ದರೆ. ಎಚ್.ಡಿ. ಕುಮಾರಸ್ವಾಮಿ ಅವರು ಈ ಚುನಾವಣೆಯಲ್ಲಿ ರೋಚಕ ಗೆಲುವು ಸಾಧಿಸಿದ್ದಾರೆ.

ಎಚ್‌ಡಿಕೆ ಗೆಲುವಿಗೆ ವರವಾದ ಸುಮಲತಾ ಗೈರು
ನಟ ದರ್ಶನ್ ಪ್ರಚಾರ ನಡೆಸಿದ್ದ ಕೈ ಅಭ್ಯರ್ಥಿ ಹೀನಾಯ ಸೋಲು



ಮಂಡ್ಯ: ಕಳೆದ ಬಾರಿ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಮಂಡ್ಯ ಕ್ಷೇತ್ರದಿಂದ ಪಕ್ಷೇತರವಾಗಿ ಸ್ಪರ್ಧಿಸಿದ್ದ ಸುಮಲತಾ ಅಂಬರೀಶ್ ಗೆಲುವಿಗೆ ಟೊಂಕಕಟ್ಟಿ ನಿಂತು ಗೆಲುವಿಗೆ ಕಾರಣರಾಗಿದ್ದ ನಟ ದರ್ಶನ್ ಈ ಬಾರಿ ಪ್ರಚಾರ ನಡೆಸಿದ್ದ ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಹೀನಾಯವಾಗಿ ಸೋಲನುಭವಿಸಿದ್ದಾರೆ.

ಈ ಬಾರಿ ಬಿಜೆಪಿ ಜೊತೆಗೆ ಮೈತ್ರಿಯಾದ ಹಿನ್ನೆಲೆ ಮಂಡ್ಯ ಕ್ಷೇತ್ರದಿಂದ ಕುಮಾರಸ್ವಾಮಿ ಕಣಕ್ಕಿಳಿದಿದ್ದರೂ ಬಿಜೆಪಿ ಸೇರ್ಪಡೆಯಾಗಿದ್ದ ಸುಮಲತಾ ಅವರು ಒಂದು ದಿನವೂ ಮೈತ್ರಿ ಅಭ್ಯರ್ಥಿ ಪರ ಚುನಾವಣಾ ಪ್ರಚಾರಕ್ಕೆ ಬಾರದೆ ಜಾಣನಡೆ ಅನುಸರಿಸಿ ಮೌನವಾಗಿದ್ದು ಎಚ್‌ಡಿಕೆ ಗೆಲುವಿಗೆ ವರದಾನವಾಗಿದೆ.

28 ಲೋಕಸಭಾ ಕ್ಷೇತ್ರಗಳಲ್ಲಿ 28 ಕ್ಷೇತ್ರಗಳನ್ನ ಗೆಲ್ಲುವ ನಿಟ್ಟಿನಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಯಾಗಿತ್ತು. ಅದರಂತೆ ಅಬ್ಬರದ ಪ್ರಚಾರ ಹಾಗೂ ತಂತ್ರಗಾರಿಕೆಯನ್ನ ಕಮಲ–ದಳ ನಾಯಕರ ತಂತ್ರಗಾರಿಕೆ ಕೊನೆಗೂ ಯಶಸ್ವಿಯಾಗಿದೆ. ಮಂಡ್ಯ ಲೋಕಸಭಾ ಕ್ಷೇತ್ರ ದಳಪತಿಗಳ ಭದ್ರಕೋಟೆಯಾಗಿದ್ದು, 2019 ರ ಲೋಕಸಭಾ ಚುನಾವಣೆಯಲ್ಲಿ ಹೀನಾಯವಾಗಿ ಸೋಲು ಕಂಡಿದ್ದ ದಳಪತಿಗಳು ಈ ಬಾರಿ ಕ್ಷೇತ್ರವನ್ನ ವಶಪಸಿಕೊಳ್ಳುವ ನಿಟ್ಟಿನಲ್ಲಿ ಹಲವು ತಂತ್ರಗಳನ್ನ ನಡೆಸಿದ್ದು, ಕೊನೆಗೂ ಮಂಡ್ಯ ಜನತೆ ಮಾಜಿ ಮುಖ್ಯಮಂತ್ರಿ ಹೆಚ್ ಡಿ ಕುಮಾರಸ್ವಾಮಿ ಅವರ ಕೈ ಹಿಡಿದಿದ್ದಾರೆ.

ಮದ್ದೂರಿನಲ್ಲಿ ಎಚ್‌ಡಿಕೆಗೆ ಅದ್ಧೂರಿ ಸ್ವಾಗತ
ಕಾರ್ಯಕರ್ತರಿಂದ ಜಯಘೋಷ



ಕಾಯಕಯೋಗಿ ಸುದ್ದಿ

ಮದ್ದೂರು: ಮಂಡ್ಯ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಎಂಟು ವಿಧಾನಸಭಾ ಕ್ಷೇತ್ರಗಳಲ್ಲೂ ಭರ್ಜರಿ ಲೀಡ್ ಪಡೆಯುವ ಮೂಲಕ ದಾಖಲಾರ್ಹ ಗೆಲುವು ಸಾಧಿಸಿದ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರಿಗೆ ಕಾರ್ಯಕರ್ತರು ಮದ್ದೂರಿನಲ್ಲಿ ಅಭೂತಪೂರ್ವ ಸ್ವಾಗತವನ್ನು ಕೋರಿ ಜಯ ಘೋಷಗಳನ್ನು ಮೊಳಗಿಸಿದರು.

ಇದೇ ಮೊದಲ ಬಾರಿಗೆ 2.84.620 ಮತಗಳ ಅಂತರದಿಂದ ಕಾಂಗ್ರೆಸ್ ಅಭ್ಯರ್ಥಿಯನ್ನ ಸೋಲಿಸಿ ಜಯ ಬೇರೆ ಗಳಿಸಿದ ಕುಮಾರಸ್ವಾಮಿ ಮದ್ದೂರು ಟಿವಿ ವೃತ್ತಕ್ಕೆ ಆಗಮಿಸುತ್ತಿದ್ದಂತೆ ಕಾರ್ಯಕರ್ತರು ಪಟಾಕಿ ಸಿಡಿಸಿ ಸಿಹಿ ವಿತರಿಸಿ ಸಂಭ್ರಮದಿಂದ ಹೆಚ್‌ಡಿ ಕುಮಾರಸ್ವಾಮಿ ನಿಖಿಲ್ ಕುಮಾರಸ್ವಾಮಿಯವರನ್ನು ಸ್ವಾಗತಿಸಿದರು. ಮಾಜಿ ಸಚಿವ ಡಿಸಿ ತಮ್ಮಣ್ಣ ಹಾಗೂ ಮನ್ ಮೂಲ್ ನಿರ್ದೇಶಕ ನಿರ್ದೇಶಕ ಎಸ್ ಪಿ ಸ್ವಾಮಿ ಹಾಗೂ ಕಾರ್ಯಾಧ್ಯಕ್ಷ ಮಾದನಾಯಕನಹಳ್ಳಿ ರಾಜಣ್ಣ ಅಪಾರ ಕಾರ್ಯಕರ್ತರು ಎಚ್‌ಡಿಕೆಗೆ ಹಾರ ಹಾಕಿ ಸಂಭ್ರಮಿಸಿದರು.

ಕುಮಾರಸ್ವಾಮಿಯವರು ಕಾರಿನಲ್ಲಿ ನಿಂತು ಎಲ್ಲರಿಗೂ ಕೈ ಬಿಸಿ ಶುಭಾಶಯ ಕೋರಿ ತಮ್ಮ ಸಹಕಾರ ಆಶೀರ್ವಾದ ಹೀಗೆ ಇರಲಿ ಎಂದು ಕಾರ್ಯಕರ್ತರಿಗೆ ಸಮರ್ಪಣೆ ಮಾಡಿದರು.

ಅರ್ಧ ಗಂಟೆಗೂ ಹೆಚ್ಚು ಕಾಲ ಕುಮಾರಸ್ವಾಮಿ ಹಾಗೂ ನಿಖಿಲ್ ಕುಮಾರಸ್ವಾಮಿ ಅವರ ಕಾರಣ ಅಡ್ಡಗಟ್ಟಿ ಕಾರ್ಯಕರ್ತರು ಹರ್ಷೋದ್ಗಾರ ಕವಾಗಿ ಘೋಷಣೆಗಳನ್ನು ಕೂಗುತ್ತಾ ಅವರನ್ನು ಸ್ವಾಗತಿಸಿ ಬಿಳ್ಕೊಟ್ಟರು.

ಇವಳೆ ಪುರಸಭಾ ಮಾಜಿ ಅಧ್ಯಕ್ಷರಾದ ಸುರೇಶ್ ಕುಮಾರ್ ಸದಸ್ಯರಾದ ಪ್ರಿಯಾಂಕ ಗೌಡ ತಾಲೂಕು ಅಧ್ಯಕ್ಷ ದಿವ್ಯ . ಸಂತೋಷ್ ಅಮರ್. ಸತೀಶ್. ಪ್ರಸನ್ನ. ಶಿವರಾಜ್. ಉದಯ್ ಯೋಗಾನಂದ. ರವಿ ಚನ್ನಸಂದ್ರ. ಅವಿನಂದನ್. ಮಹೇಂದ್ರ. ಕೆಂಗಲ್ ಗೌಡ. ಶಿವರಾಂ. ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಊಹೆಗೂ ನಿಲುಕದ ಗೆಲುವು: ಡಿಸಿಟಿ ಅಚ್ಚರಿ

ಕಾಯಕಯೋಗಿ ಸುದ್ದಿ

ಮದ್ದೂರು . ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಮಾಜಿ ಮುಖ್ಯಮಂತ್ರಿ ಎಚ್ ಡಿ ಕುಮಾರಸ್ವಾಮಿಗೆ 2,82,000ಕ್ಕೂ ಹೆಚ್ಚು ಮತಗಳು ಅಂತರ ಹಾಗೂ ಮದ್ದೂರು ತಾಲೂಕಿನಲ್ಲಿ 59,000 ಲೀಡ್ ಕೊಡುವುದರ ಮೂಲಕ ಊಹೆಗೂ ನಿಲುಕದ ಫಲಿತಾಂಶವಾಗಿದೆ ಎಂದು ಮಾಜಿ ಶಾಸಕ ಡಿ.ಸಿ.ತಮ್ಮಣ್ಣ ಮತದಾರರಿಗೆ ಕೃತಜ್ಞತೆ ಸಲ್ಲಿಸಿದರು.

ಪಟ್ಟಣದಲ್ಲಿ ತಮ್ಮ ನಿವಾಸದಲ್ಲಿ ಗೆಲುವು ಅಂತರ ಹೆಚ್ಚಾದಂತೆ ಶಾಸಕರು ಕಾರ್ಯಕರ್ತರಿಗೆ ಸಿಹಿ ಲಾಡನ್ನು ತಿನಿಸಿ ಸಂಭ್ರಮ ಆಚರಿಸಿ ನಂತರ ಮಾತನಾಡಿದರು.

ಕಳೆದ ಚುನಾವಣೆಯಲ್ಲಿ ಏಳು ಕ್ಷೇತ್ರದಲ್ಲಿ ಆರು ಕ್ಷೇತ್ರಗಳಲ್ಲಿ ಸೋಲನ್ನು ಉಂಡು ಕಹಿ ನೆನಪನ್ನು ಅನುಭವಿಸಿದ್ದು . ನೋವನ್ನು ಮರೆಸಿ ನಮಗೆ ಈ ಚುನಾವಣೆಯಲ್ಲಿ ಕುಮಾರಸ್ವಾಮಿಯವರು ದೊಡ್ಡಮಟ್ಟದ ಅಂತರದಿಂದ ಗೆಲುವು ಸಾಧಿಸಿದ್ದಾರೆ . ಆನಂದ ಉಂಟಾಗಿದೆ ಎಂದರು.

ಮದ್ದೂರು ಕ್ಷೇತ್ರದ ನನ್ನ ಮತದಾರರು ಅತಿ ಹೆಚ್ಚು ಬಹುಮತವನ್ನು ನೀಡಿದ್ದಾರೆ ಅವರಿಗೆ ಹೃದಯಪೂರ್ವಕ ಧನ್ಯವಾದಗಳು ಅರ್ಪಿಸುತ್ತೇನೆ. ಮಂಡ್ಯ ಲೋಕಸಭಾ ಕ್ಷೇತ್ರದ ಎಲ್ಲಾ ಮತದಾರರಿಗೂ ಧನ್ಯವಾದಗಳು ಸಮರ್ಪಣೆ ಮಾಡುತ್ತೇನೆ .ಈ ಹಿಂದೆ ಕುಮಾರಸ್ವಾಮಿ ಅವರು ಎರಡು ಬಾರಿ ಮುಖ್ಯಮಂತ್ರಿಯಾಗಿ ಅಭಿವೃದ್ಧಿಯನ್ನು ಮಾಡಿದರು ಸಹ ಕಳೆದ ಸಾರಿ ಈ ಗ್ಯಾರಂಟಿಗಳ ವ್ಯಾಮೋಹದಿಂದಲೂ ಏನೋ ಸ್ವಲ್ಪ ವಿಚಲಿತರಾಗಿದ್ದರು. ಒಂದೇ ವರ್ಷದಲ್ಲಿ ಕಾಂಗ್ರೆಸ್ ಪಕ್ಷದ ಸಾಧನೆಯನ್ನು. ಅರಿತುಕೊಂಡು. ಮತದಾರು ಅದರಿಂದಲೇ ಈ ರೀತಿ ಒಂದು ಫಲಿತಾಂಶ ಬರಲು ಸಾಧ್ಯವಾಯಿತು ಎಂದರು.

ಅವರವರ ಪಕ್ಷದವರು ಪ್ರತಿಯೊಬ್ಬರು ಅತಿ ಹೆಚ್ಚು . ಬಹುಮತದಿಂದ ಗೆಲ್ಲುತ್ತೇವೆ ಎಂದು ಹೇಳಿಕೊಳ್ಳುತ್ತಾರೆ ಅದು ಅವರಿಗೆ ಬಿಟ್ಟಿದ್ದು ಈ ಬಾರಿ ಕುಮಾರಸ್ವಾಮಿ ಅವರು ಅತಿ ಹೆಚ್ಚು ಮತವನ್ನು ನೀಡಿದ ಮತದಾರರಿಗೆ ಕೃತಜ್ಞತೆ ಸಲ್ಲಿಸಿ ನಮಗೆ ತೃಪ್ತಿ ತಂದಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಇವಳೆ ಕಾರ್ಯಧ್ಯಕ್ಷ ಮಾದನಾಯಕನಹಳ್ಳಿ ರಾಜಣ್ಣ. ರಾಮಕೃಷ್ಣ .ಅಮರ್. ರವಿಕುಮಾರ್. ಉದಯ್. ರವಿಚನ್ನಸಂದ್ರ. ರಾಜಣ್ಣ. ಅಪ್ಪು ಪಿ ಗೌಡ. ಪ್ರಿಯಾಂಕ ಗೌಡ. ಪುರಸಭೆ ಮಾಜಿ ಅಧ್ಯಕ್ಷ ಸುರೇಶ್ ಕುಮಾರ್ ಮಹೇಂದ್ರ ಕೆಂಗಲ ಗೌಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಗುಡ್‌ಷಫರ್ಡ್ ಶಾಲೆಗೆ ಆಗಮಿಸಿದ ವಿದ್ಯಾರ್ಥಿಗಳಿಗೆ ಹೂ ನೀಡಿ ಸ್ವಾಗತ



ಕಾಯಕಯೋಗಿ ಸುದ್ದಿ

ಮಂಡ್ಯ: ನಗರದ ಗುಡ್‌ಷಫರ್ಡ್ ಶಿಕ್ಷಣ ಟ್ರಸ್ಟ್ ವತಿಯಿಂದ ನಡೆದ ಶಾಲಾ ಪುನಾರಂಭ ಕಾರ್ಯಕ್ರಮವನ್ನು ಜಿಲ್ಲಾ ಕಾರ್ಮಿಕ ಅಧಿಕಾರಿ ಚೇತನ್ ಕುಮಾರ್ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, ಮಕ್ಕಳಾದವರು ಗುರು ಹಿರಿಯರನ್ನು ಗೌರವಿಸುವ ಮನೋ ಭಾವವನ್ನು ಬೆಳೆಸಿಕೊಳ್ಳಬೇಕು. ಗುರು ಹಿರಿಯರ ಮಾರ್ಗದರ್ಶನವು ಶಾಲಾ ಹಂತದಲ್ಲಿಯೇ ವಿದ್ಯಾರ್ಥಿಗಳಿಗೆ ಅತಿಮುಖ್ಯವಾಗಿದೆ ಎಂಬುದನ್ನು ಮರೆಯಬಾರದು ಎಂದರು.

ಹಿಂದುಳಿದ ವರ್ಗದ ತಾಲ್ಲೂಕು ಕಲ್ಯಾಣಾಧಿಕಾರಿ ಎಂ.ಟಿ.ಶ್ರೀನಿವಾಸ್ ಮಾತನಾಡಿ, ಶಿಕ್ಷಕರಾದವರು ಉತ್ತಮ ಶಿಕ್ಷಣವನ್ನು ಮಕ್ಕಳಿಗೆ ನೀಡಬೇಕು. ಅದು ಮುಂದಿನ ಅವರ ಭವಿಷ್ಯದ ಬಾಳಿನ ಬೆಳಕಾಗಿ ಬರಲಿದೆ, ಗುಣಮಟ್ಟದ ಶಿಕ್ಷಣವನ್ನೇ ಅವರ ತಲೆಯಲ್ಲಿ ತುಂಬುವುದರಿಂದ ಭವಿಷ್ಯದ ಮಕ್ಕಳಾಗಿ ಬದಲಾಗಿ ದೇಶಕ್ಕೆ ಕೀರ್ತಿ ತರುವ ಕೆಲಸ ಮಾಡುತ್ತಾರೆ ಎಂದು ಅಭಿಪ್ರಾಯ ಪಟ್ಟರು. ಶಾಲೆಗೆ ಆಗಮಿಸಿದ ವಿದ್ಯಾರ್ಥಿಗಳಿಗೆ ಗಣ್ಯರು ಹೂ ನೀಡುವ ಮೂಲಕ ಶಾಲೆಗೆ ಸ್ವಾಗತಿಸಿದರು. ಸಾಡೆ ದೇವಾಲಯದ ಸಭಾ ಪಾಲಕ ಆಯಂಡ್ರೂಜಾನ್, ಟ್ರಸ್ಟ್ ಅಧ್ಯಕ್ಷ ಜಾರ್ಜ್ ಮೋಹನ್‌ಕುಮಾರ್, ಟಿ.ಡಬ್ಲ್ಯೂ.ಆರ್. ಸಂಸ್ಥೆಯ ಜಿಲ್ಲಾ ಸಂಯೋಜಕ ಪುಟ್ಟರಾಜು, ಟ್ರಸ್ಟ್‌ನ ವೈ ಥಾಮಸ್ ಬೆಂಜಮಿನ್, ಕಾರ್ಯದರ್ಶಿ ಎ.ಮೋರಿಸ್ ಜೈಕುಮಾರಿ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಮಂಡ್ಯ: 8 ಕ್ಷೇತ್ರದಲ್ಲೂ ಭರ್ಜರಿ ಲೀಡ್
ಜೆಡಿಎಸ್–ಬಿಜೆಪಿ ಕಾರ್ಯಕರ್ತರಿಂದ ವಿಜಯೋತ್ಸವ

ಕಾಯಕಯೋಗಿ ಸುದ್ದಿ



ನಗರದ ತಾಲೂಕು ಕಚೇರಿ ಸಮೀಪ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಬಿ ಎಸ್ ಪಿ ಅಭ್ಯರ್ಥಿ ಡಾ ಹ ರಾ ಮಹೇಶ್ ಮತಯಾಚನೆ ಮಾಡಿದರು ಈ ಸಂದರ್ಭದಲ್ಲಿ ಕೃಷ್ಣಮೂರ್ತಿ ಶಿವಶಂಕರ್ ಇದ್ದರು ನಗರದ ತಾಲೂಕು ಪಂಚಾಯತಿ ಸಮೀಪ ದಕ್ಷಿಣ ಶಿಕ್ಷಕರ ಕ್ಷೇತ್ರದ ಮೈತ್ರಿ ಅಭ್ಯರ್ಥಿ ಕೆ ವಿವೇಕಾನಂದ ಪರ ಬಿಜೆಪಿ ಮುಖಂಡ ಭೀಮೇಶ್ ಮತಯಾಚನೆ ಮಾಡಿದರು ಈ ಸಂದರ್ಭದಲ್ಲಿ ಶಿವಕುಮಾರ್ ಆರಾಧ್ಯ ಇದ್ದರು.



ಮೈಸೂರು ಯಧುವೀರ್ ಒಡೆಯರ್ ಭರ್ಜರಿ ಗೆಲುವು. ಕಾರ್ಯಕರ್ತರ ಸಂಭ್ರಮಾಚರಣೆ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಭರ್ಜರಿ ಗೆಲುವು ದಾಖಲಿಸಿದ್ದು ರಾಜವಂಶಸ್ಥನಿಗೆ ಪ್ರಜಾಪ್ರಭುತ್ವದ ಸಂಸದ ಸ್ಥಾನ ಒಲಿದು ಬಂದಿದೆ. ಅತ್ತ ಯಧುವೀರ್ ಗೆಲುವು ಖಚಿತವಾಗುತ್ತಿದ್ದಂತೆ ಕಾರ್ಯಕರ್ತರ ಸಂಭ್ರಮಾಚರಣೆ ಮುಗಿಲು ಮಟ್ಟಿದ್ದು ಶಾಸಕ ಶ್ರೀವತ್ಸ ನೇತೃತ್ವದಲ್ಲಿ ನಗರದ ಅಗ್ರಹಾರದ ನೂರೊಂದು ಗಣಪತಿ ದೇಗುಲದಲ್ಲಿ ವಿಶೇಷ ಪೂಜೆ ಸಲ್ಲಿಸಿ ಸಾರ್ವಜನಿಕರಿಗೆ ಸಿಹಿ ಹಂಚಿ ಸಂಭ್ರಮಿಸಿದ್ದಾರೆ.

ನಗರದಲ್ಲಿ ಬಾಲಕಾರ್ಮಿಕರ ರಕ್ಷಣೆ



ಮೈಸೂರು: ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ರಕ್ಷಣೆಗೋಸ್ಕರ ಮುಂದಾದ ತಹಸಿಲ್ದಾರ್ ಸುರೇಂದ್ರ ಮೂರ್ತಿ. ತಾಲೂಕಿನ ಹೈಟ್ಸ್ಯಾಕ್ ಪಂಚರ್ ಶಾಪ್ ಹಾಗೂ ಮೀರಾ ಫ್ಯಾನ್ಸಿ ಸ್ಟೋರ್ ಗಳಲ್ಲಿ ಕೆಲಸ ಮಾಡುತ್ತಿದ್ದ ಬಾಲಕಾರ್ಮಿಕರ ರಕ್ಷಣೆ. ಸೆಕ್ಷನ್ 17 ಅಧಿಕಾರಿಗಳ ತಂಡ ಅನಿರೀಕ್ಷಿತವಾಗಿ ಮಾನ್ಯ ತಹಸಿಲ್ದಾರ್ ಸುರೇಂದ್ರ ಮೂರ್ತಿ ಹಾಗೂ ಕಾರ್ಮಿಕ ನಿರೀಕ್ಷಕರು ಎನ್, ಮಂಜುನಾಥ್ ರವರ ನೇತೃತ್ವದಲ್ಲಿ ದಾಳಿ ನಡೆಸಿ ಪಟ್ಟಣದ ಮೀರಾ ಫ್ಯಾನ್ಸಿ ಸ್ಟೇಷನರಿ ಹಾಗೂ ಹೈಟೆಕ್ ಸರ್ವಿಸ್ ಪಂಚರ್ ಶಾಪ್ ಅಂಗಡಿಗಳಲ್ಲಿ ಕೆಲಸ ಮಾಡುತ್ತಿದ್ದ ಬಾಲಕಾರ್ಮಿಕರನ್ನು ರಕ್ಷಣೆ ಮಾಡಿದ್ದಾರೆ. ರಕ್ಷಣೆ ಮಾಡಿದ ಬಾಲ ಕಾರ್ಮಿಕರನ್ನು ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯಕೀಯ ತಪಾಸಣೆ ನಡೆಸಿ ನಂತರ ವಿಜಯನಗರದ ಬಾಲ ಮಂದಿರಕ್ಕೆ ಬಿಡಲಾಗಿದೆ ಎಂದು ಕಾರ್ಮಿಕ ನಿರೀಕ್ಷಕ ಎನ್, ಮಂಜುನಾಥ್ ತಿಳಿಸಿದರು. ಈ ಸಂದರ್ಭದಲ್ಲಿ ಎಲ್ಲಾ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ವಾಂತಿಬೇದಿ ಪ್ರಕರಣ: ಮಾರ್ಬಳ್ಳಿ ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲಿಸಿದ ಸಿಇಒ ಕೆ.ಎಂ.ಗಾಯಿತ್ರಿ

ಕಾಯಕಯೋಗಿ ಸುದ್ದಿ

ಮೈಸೂರು: ತಾಲ್ಲೂಕಿನ ಜಯಪುರ ಹೋಬಳಿಯ ಮಾರ್ಬಳ್ಳಿ ಗ್ರಾಮದಲ್ಲಿ ನೂತನ ಮನೆಯ ಗೃಹಪ್ರವೇಶದ ವೇಳೆ ಊಟ ಸೇವಿಸಿ ಗ್ರಾಮದ 39 ಮಂದಿಗೆ ವಾಂತಿಭೇದಿ ಕಾಣಿಸಿಕೊಂಡ ಹಿನ್ನೆಲೆ ಜಿಲ್ಲಾ ಪಂಚಾಯತ್ ಸಿಇಒ ಕೆ.ಎಂ.ಗಾಯಿತ್ರಿ ಅವರು ಸೋಮವಾರ ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದರು.

ಈ ವೇಳೆ ಮಾರ್ಬಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಅಧ್ಯಕ್ಷರು, ಸದಸ್ಯರು ಹಾಗೂ ಗ್ರಾಮಸ್ಥರ ಸಮ್ಮುಖದಲ್ಲಿ ಸಭೆ ನಡೆಸಿದ ಅವರು, ಕಲುಷಿತ ಆಹಾರ ಸೇವನೆಯಿಂದಾಗ ವಾಂತಿಭೇದಿ ಕಾಣಿಸಿಕೊಂಡಿದೆ. ಹೀಗಾಗಿ ಗ್ರಾಮದಲ್ಲಿ ನೈರ್ಮಲ್ಯ ಕಾಪಾಡಿಕೊಳ್ಳಲು ಆದ್ಯತೆ ನೀಡಬೇಕು. ಸ್ವಚ್ಛತೆ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಕೂಡ ಗ್ರಾಮ ಪಂಚಾಯಿತಿ ಜೊತೆ–ಗೆ ಕೈಜೋಡಿಸಿ ಸಹಕರಿಸಬೇಕು ಎಂದು ತಿಳಿಸಿದರು.

ಗ್ರಾಮದಲ್ಲಿ ಜರುಗುವ ಯಾವುದೇ ಕಾರ್ಯಕ್ರಮಗಳಲ್ಲಿ ಪರಿಶುದ್ಧವಾಗಿ ಆಹಾರ ಸಿದ್ಧಪಡಿಸಲು ಗಮನಹರಿಸಬೇಕು. ಶುದ್ಧ ನೀರನ್ನು ಬಳಸುವ ಮೂಲಕ ಆಹಾರ ತಯಾರಿಸಬೇಕು. ಶುಚಿತ್ವ ಕಾಯ್ದುಕೊಳ್ಳುವ ಬಗ್ಗೆ ಯಾರೂ ನಿರ್ಲಕ್ಷ್ಯ ಮಾಡಬಾರದು ಎಂದು ಸಲಹೆ ನೀಡಿದರು.



ಗ್ರಾಮ ಪಂಚಾಯಿತಿ ವತಿಯಿಂದ ಶುದ್ಧ ಕುಡಿಯುವ ನೀರಿನ ಪೂರೈಕೆಗಾಗಿ ಅನೇಕ ಕ್ರಮಗಳನ್ನು ಕೈಗೊಳ್ಳಲಾಗಿದೆ. ಇದರ ಜೊತೆಗೆ ಮಳೆಗಾಲದಲ್ಲಿ ಜನರು ಚನ್ನಾಗಿ ಕುದಿಸಿ ಆರಿಸಿದ ನೀರನ್ನು ಕುಡಿಯಬೇಕು. ಬಿಸಿ ಆಹಾರ ಸೇವನೆಯನ್ನು ರೂಢಿಸಿಕೊಳ್ಳಬೇಕು ಎಂದು ಹೇಳಿದರು.

ಬಳಿಕ ತಾತ್ಕಾಲಿಕ ಚಿಕಿತ್ಸಾಲಯಕ್ಕೆ ಭೇಡಿ ನೀಡಿದ ಅವರು, ರೋಗ ಲಕ್ಷಣಗಳು ಕಂಡುಬರುವ ಮಂದಿಗೆ ಗುಣಮಟ್ಟದ ತಪಾಸಣೆ ನಡೆಸಿ, ನಿಖರವಾದ ಮಾಹಿತಿಯೊಂದಿಗೆ ದಾಖಲು ಮಾಡಿಕೊಳ್ಳಬೇಕು. ಉತ್ತಮ ಚಿಕಿತ್ಸೆಯನ್ನು ನೀಡಿ ಆರೈಕೆ ಮಾಡಬೇಕು. ಒಂದು ವೇಳೆ ಸ್ಥಿತಿ ಗಂಬೀರ ಎಂದು ಕಂಡುಬಂದಲ್ಲಿ ಕೂಡಲೇ ಜಿಲ್ಲಾಸ್ಪತ್ರೆಗೆ ದಾಖಲು ಮಾಡಿಕೊಳ್ಳಬೇಕು ಎಂದು ಸೂಚಿಸಿದರು. ಜಿಲ್ಲಾ ಆರೋಗ್ಯಾಧಿಕಾರಿ ಡಾ.ಕುಮಾರಸ್ವಾಮಿ ಅವರು ಮಾತನಾಡಿ, ಗ್ರಾಮದಲ್ಲಿ ಮೃತರಾದ ಮಹಿಳೆಯೊಬ್ಬರು ಕಿಡ್ನಿ ವೈಫಲ್ಯ, ಅಧಿಕ ರಕ್ತದೊತ್ತಡ, ಮಧುಮೇಹ ಖಾಯಿಲೆಯಿಂದ ಬಳಲುತ್ತಿದ್ದರು. ಅವರಿಗೆ ಕಾಲರ ರೋಗ ಇರಲಿಲ್ಲ ಎಂದು ಸ್ಪಷ್ಟನೆ ನೀಡಿದರು.

ಈ ಸಂದರ್ಭದಲ್ಲಿ ಮೈಸೂರು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಟಿ.ಪ್ರದೀಪ್ ಅವರು, ಗ್ರಾಮ ಪಂಚಾಯತಿ ಅಧ್ಯಕ್ಷರಾದ ಮಹದೇವನಾಯಕ, ಗ್ರಾಮೀಣ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರರಾದ ರಂಜಿತ್ ಅವರು, ಪಿಡಿಒ ಕುಮಾರಸ್ವಾಮಿ ಅವರು ಸೇರಿದಂತೆ ಮುಂತಾದವರು ಹಾಜರಿದ್ದರು.

ಜೂ.5 ರಂದು ವಿಶ್ವ ಪರಿಸರ ದಿನಾಚರಣೆ ಆಚರಣೆ

ಮೈಸೂರು: ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದಲ್ಲಿನ ಸರಸ್ವತಿಪುರಂನ ಚಂದ್ರವನ ಸಸ್ಯೋದ್ಯಾನದಲ್ಲಿ ಜೂ.05 ರಂದು ಬೆಳಿಗ್ಗೆ 10.30 ಗಂಟೆಗೆ ವಿಶ್ವಪರಿಸರ ದಿನಾಚರಣೆಯನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಕನ್ನಡಪ್ರಭ ಪತ್ರಿಕೆಯ ಕಾರ್ಯ ನಿರ್ವಾಹಕ ಸಂಪಾದಕರು ಹಾಗೂ ಲೇಖಕರಾದ ಅಂಶಿ ಪ್ರಸನ್ನ ಕುಮಾರ್ ಅವರು ಉದ್ಘಾಟಿಸಲಿದ್ದು, ಸಂಸ್ಥೆಯ ಪ್ರಾಚಾರ್ಯರಾದ ಡಾ. ಕೆ.ಎಸ್.ರಾಧಾಕೃಷ್ಣ ರಾಮರಾವ್ ಅವರು ಅಧ್ಯಕ್ಷತೆ ವಹಿಸುವರು.

ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ನಿವೃತ್ತ ಪ್ರಾಚಾರ್ಯರಾದ ಡಾ. ಸತ್ಯನಾರಾಯಣ ಭಟ್ ಅವರು ಗೌರವ ಅತಿಥಿಗಳಾಗಿ ಭಾಗವಹಿಸುವರು. ಕಾರ್ಯಕ್ರಮದಲ್ಲಿ ಸಾರ್ವಜನಿಕರಿಗೆ ಉಚಿತವಾಗಿ ಔಷಧ ಸಸ್ಯಗಳ ವಿತರಣೆ ಹಾಗೂ ಔಷಧ ಸಸ್ಯಗಳ ಉಪಯೋಗಗಳ ಬಗ್ಗೆ ಪ್ರಾತ್ಯಕ್ಷಿಕೆಗಳನ್ನು ನಡೆಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಡಾ. ಶ್ರೀನಿವಾಸ್ ಯಾದವ್ ಅವರ ದೂ.ಸಂ:9886744739 ಅಥವಾ ಡಾ. ವೀಣಾ ನಾಯ್ಡು ಅವರ ದೂ.ಸಂ: 9901578900 ನ್ನು ಸಂಪರ್ಕಿಸಬಹುದು ಎಂದು ಸರ್ಕಾರಿ ಆಯುರ್ವೇದ ವೈದ್ಯಕೀಯ ಕಾಲೇಜಿನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಪರಿಚಿತ ಹೆಂಗಸಿನ ಶವ ಪತ್ತೆ



ಮೈಸೂರು: ಮೇ.30 ರಂದು ಮೈಸೂರಿನ ಕೆ.ಆರ್ ಆಸ್ಪತ್ರೆಯಲ್ಲಿ ಸುಮಾರು 70 ವರ್ಷದ ಹೆಂಗಸು ಮೃತಪಟ್ಟಿದ್ದು, ನಂಜನಗೂಡು ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೃತ ಹೆಂಗಸಿನ ಚಹರೆ:ಮೃತ ಮಹಿಳೆಗೆ ಸುಮಾರು 70 ವರ್ಷ ವಯಸ್ಸಾಗಿದ್ದು, 5.2 ಅಡಿ ಎತ್ತರ, ಗೋಧಿ ಮೈ ಬಣ್ಣ, ಬಿಳಿ ತಲೆ ಕೂದಲನ್ನು ಹೊಂದಿರುತ್ತಾರೆ. ಮೃತ ಅಪರಿಚಿತ ಹೆಂಗಸಿನ ಬಗ್ಗೆ ಮಾಹಿತಿ ದೊರೆತಲ್ಲಿ ಮೈಸೂರಿನ ಎಸ್.ಪಿ ಅವರ ದೂ.ಸಂ:0821–2520040, ಮೈಸೂರು ಜಿಲ್ಲಾ ನಿಸ್ತಂತು ಕೊಠಡಿ ದೂ.ಸಂ:0821–2444080, ನಂಜನಗೂಡು ಪಟ್ಟಣ ಪೊಲೀಸ್ ಠಾಣೆಯ ದೂ.ಸಂ:08221–228383 ಅಥವಾ nanjangudtownmys@ksp.gov.in ನ್ನು ಸಂಪರ್ಕಿಸಹುದು ಎಂದು ನಂಜನಗೂಡು ಪಟ್ಟಣ ಪೊಲೀಸ್ ಠಾಣಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದಕ್ಷಿಣ ಕಾಶಿಯಲ್ಲಿ ಶೇ.88.80 ರಷ್ಟು ಮತದಾನ: ಹಕ್ಕು ಚಲಾಯಿಸಿದ ದಕ್ಷಿಣ ಕ್ಷೇತ್ರದ ಶಿಕ್ಷಕರು



ಕಾಯಕಯೋಗಿ ಸುದ್ದಿ

ನಂಜನಗೂಡು: ದಕ್ಷಿಣ ಕಾಶಿ ನಂಜನಗೂಡಿನಲ್ಲಿದಕ್ಷಿಣ ಶಿಕ್ಷಕರಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯನ್ನು ನಂಜನಗೂಡು ನಗರದ ತಾಲ್ಲೂಕು ಆಡಳಿತ ಭವನದಲ್ಲಿ ಶಾಂತಿಯುತವಾಗಿ ಮತದಾನ ನಡೆದಿದ್ದು ಶೇ.88.80 ರಷ್ಟು ಮತದಾನ ಮಾಡಲಾಗಿದ್ದು, ಈ ಬಾರಿ ದಾಖಲೆ ಮತದಾನವಾಗಿದೆ.

ಬೆಳಿಗ್ಗೆಯಿಂದಲೇ ಪ್ರಾರಂಭವಾದ ಮತದಾನ ಪ್ರಕ್ರಿಯೆ ಮತಗಟ್ಟೆಯತ್ತ ಶಿಕ್ಷಕರು ತೆರಳಿ, ತಮ್ಮ ಹಕ್ಕನ್ನು ಚಲಾಯಿಸಿದ್ದಾರೆ.

ಕಾಂಗ್ರೆಸ್, ಜನತಾದಳ–ಬಿಜೆಪಿ ಮೈತ್ರಿಕೂಟ, ಬಿಎಸ್ಪಿ ಸೇರಿದಂತೆ 11 ಮಂದಿ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ದಕ್ಷಿಣ ಶಿಕ್ಷಕರ ಕ್ಷೇತ್ರದ ವ್ಯಾಪ್ತಿಗೆ ಬರುವ ಮೈಸೂರು, ಚಾಮರಾಜನಗರ, ಹಾಸನ, ಮಂಡ್ಯ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬೆಳಗ್ಗೆ 8 ರಿಂದ ಸಂಜೆ 5 ಗಂಟೆಯವರೆಗೆ ಶಾಂತಿಯುತವಾಗಿ ಮತದಾನ ನಡೆಯಿತು. ನಾಲ್ಕು ಜಿಲ್ಲೆಗಳಿಂದ ಸುಮಾರು 21.549 ಮಂದಿ ಶಿಕ್ಷಕರು ಮತದಾರರು ಇದ್ದು, 11988 ಪುರುಷರು, 9550 ಮಹಿಳೆಯರು, ಓರ್ವ ತೃತೀಯ ಲಿಂಗಿ ಶಿಕ್ಷಕ ಮತದಾರರಿದ್ದಾರೆ. ನಂಜನಗೂಡು ತಾಲ್ಲೂಕಿನಲ್ಲಿ ಒಟ್ಟು 750 ಶಿಕ್ಷಕ ಮತದಾರರಿದ್ದು, ಇದರಲ್ಲಿ 479 ಪುರುಷ ಮತದಾರರು, 271 ಮಹಿಳಾ ಮತದಾರರಿದ್ದರು. ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆಯೊಂದಿಗೆ ಮತದಾನ ನಡೆಸಲಾಗಿದ್ದು, ಕಾಂಗ್ರೆಸ್ ಅಭ್ಯರ್ಥಿ ಮರಿತಿಬ್ಬೇಗೌಡ, ಮೈತ್ರಿ ಅಭ್ಯರ್ಥಿ ವಿವೇಕಾನಂದ ನಡುವೆ ತೀವ್ರ ಪೈಪೋಟಿ ಏರ್ಪಟ್ಟಿದೆ. ಶಾಲಾ ಕಾಲೇಜುಗಳ ಶಿಕ್ಷಕರು ಸರತಿ ಸಾಲಿನಲ್ಲಿ ನಿಂತು ತಮ್ಮ ಹಕ್ಕನ್ನು ಚಲಾಯಿಸಿದ್ದಾರೆ. ಒಟ್ಟು 750 ಮತದಾರರಿದ್ದು, 666 ಮಂದಿ ಮತ ಚಲಾವಣೆಗೊಂಡಿವೆ. ಇದರಲ್ಲಿ 433 ಪುರುಷರು, 233 ಮಹಿಳೆಯರು ಮತ ಚಲಾಯಿಸಿದರು. ಒಟ್ಟು ಶೇ.88.80 ರಷ್ಟು ಮತದಾನ ಮಾಡಲಾಗಿದೆ.


ಒಡೆಯರಿಗೆ ಒಲಿದ ಭರ್ಜರಿ ಜಯ

ಕಾಯಕಯೋಗಿ ಸುದ್ದಿ

ಮೈಸೂರ್: ಈ ಬಾರಿ ಭಾರೀ ಕುತೂಹಲ ಮೂಡಿಸಿರುವ ಕ್ಷೇತ್ರಗಳಲ್ಲಿ ಒಂದಾಗಿತ್ತು. ಈ ಬಾರಿ ಮೈಸೂರು ರಾಜವಂಶಸ್ಥರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಬಿಜೆಪಿಯಿಂದ ಲೋಕಸಭಾ ಚುನಾವಣೆಗೆ ಸ್ಪರ್ಧಿಸಿ ಗೆಲುವು ಸಾಧಿಸಿದ್ದಾರೆ. ಕಳೆದ ಬಾರಿ ಬಿಜೆಪಿಯ ಸಂಸದರಾಗಿದ್ದ ಪ್ರತಾಪ್ ಸಿಂಹ ಅವರಿಗೇ ಈ ಬಾರಿಯೂ ಟಿಕೆಟ್ ಸಿಗಲಿದೆ ಎಂದು ನಂಬಲಾಗಿತ್ತು. ಆದರೆ, ಕೊನೆಕ್ಷಣದಲ್ಲಿ ಯದುವೀರ್ ಅವರಿಗೆ ಬಿಜೆಪಿ ಹೈಕಮಾಂಡ್ ಟಿಕೆಟ್ ನೀಡಿತ್ತು. ಇದು ಈ ಭಾಗದ ಬಿಜೆಪಿ ನಾಯಕರು ಮತ್ತು ಕಾರ್ಯಕರ್ತರಲ್ಲಿ ಅಸಮಾಧಾನವನ್ನೂ ಉಂಟುಮಾಡಿತ್ತು. ಯದುವೀರ್ ಒಡೆಯರ್ ಅವರ ಎದುರಾಳಿಯಾಗಿ ಕಾಂಗ್ರೆಸ್?ನಿಂದ ಎಂ. ಲಕ್ಷ್ಮಣ್ ಸ್ಪರ್ಧಿಸಿ ಸೋಲುಂಡಿದ್ದಾರೆ.

2009ರ ಚುನಾವಣೆಯಲ್ಲಿ ಕೊಡಗು ಜಿಲ್ಲೆಯನ್ನು ಮೈಸೂರು ಲೋಕಸಭಾ ಕ್ಷೇತ್ರಕ್ಕೆ ಸೇರ್ಪಡೆ ಮಾಡಲಾಯಿತು. ಮೈಸೂರು–ಕೊಡಗು ಕ್ಷೇತ್ರದಲ್ಲಿ ನಡೆದಿರುವ ಈ ಹಿಂದಿನ ಚುನಾವಣೆಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳೇ ಅತಿ ಹೆಚ್ಚು ಬಾರಿ ಸಂಸದರಾಗಿ ಆಯ್ಕೆಯಾಗಿದ್ದಾರೆ. ಮೈಸೂರು ರಾಜವಂಶಸ್ಥರಾದ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಅವರು 4 ಬಾರಿ ಮೈಸೂರು ಲೋಕಸಭಾ ಕ್ಷೇತ್ರದಿಂದ ಗೆಲುವು ಕಂಡಿದ್ದರು. ಈ ಬಾರಿ ಯದುವೀರ್ ಒಡೆಯರ್ ಸ್ಪರ್ಧಿಸಿ ಗೆಲುವು ಸಾಧಿಸಿದ್ದಾರೆ.

ಕಾಂಗ್ರೆಸ್ ಪಕ್ಷದ ಭದ್ರಕೋಟೆಯಾಗಿದ್ದ ಮೈಸೂರು ಲೋಕಸಭಾ ಕ್ಷೇತ್ರದಲ್ಲಿ 1998ರಲ್ಲಿ



ಬಿಜೆಪಿಯಿಂದ ಸ್ಪರ್ಧಿಸಿದ್ದ ಸಿ.ಎಚ್. ವಿಜಯಶಂಕರ್ 1,03,024 ಮತಗಳ ಅಂತರದಲ್ಲಿ ಗೆಲುವು ಸಾಧಿಸಿ ಭಾರೀ ಗೆಲುವು ಕಂಡಿದ್ದರು. ಈ ಮೂಲಕ ಈ ಕ್ಷೇತ್ರದಲ್ಲಿ ಮೊದಲ ಬಾರಿಗೆ ಬಿಜೆಪಿ ತನ್ನ ಖಾತೆ ತೆರೆದಿತ್ತು. 1999ರಲ್ಲಿ ಮತ್ತೆ ಕಾಂಗ್ರೆಸ್‌ನಿಂದು ಗೆದ್ದು ಶ್ರೀಕಂಠದತ್ತನರಸಿಂಹರಾಜ ಒಡೆಯರ್ ಲೋಕಸಭೆ ಪ್ರವೇಶಿಸಿದ್ದರು. 2004ರಲ್ಲಿ ಸಿ.ಎಚ್. ವಿಜಯಶಂಕರ್ ಬಿಜೆಪಿಯಿಂದ ಎರಡನೇ ಬಾರಿಗೆ ಲೋಕಸಭೆಗೆ ಆಯ್ಕೆಯಾಗಿದ್ದರು.

2014 ಮತ್ತು 2019ರ ಲೋಕಸಭಾ ಚುನಾವಣೆಯಲ್ಲಿ ಪತ್ರಕರ್ತರಾಗಿದ್ದ ಪ್ರತಾಪ ಸಿಂಹ ಅವರನ್ನು ಬಿಜೆಪಿಯಿಂದ ಕಣಕ್ಕಿಳಿಸಲಾಯಿತು. ಸತತವಾಗಿ ಗೆಲುವು ಕಂಡಿದ್ದ ಮತ್ತು ಅನೇಕ ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದ ಪ್ರತಾಪ್ ಸಿಂಹ ಅವರಿಗೆ ಈ ಬಾರಿ ಟಿಕೆಟ್ ಸಿಗದಿದ್ದುದಕ್ಕೆ ಬಿಜೆಪಿ ಪಕ್ಷದ ಕೆಲವು ನಾಯಕರೇ ಕಾರಣ ಎಂದು ಅವರ ಹಿಂಬಾಲಕರಲ್ಲಿ ಅಸಮಾಧಾನ ಉಂಟಾಗಿತ್ತು. ಆದರೆ, ನಂತರ ಎಲ್ಲರೂ ಒಟ್ಟಾಗಿ ಯದುವೀರ್ ಒಡೆಯರ್ ಪರವಾಗಿ ಪ್ರಚಾರ ನಡೆಸಿದ್ದರು.

ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಈ ಬಾರಿ 18 ಮಂದಿ ಸ್ಪರ್ಧಿಸಿದ್ದರು. ಆದರೆ,ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮತ್ತು ಕಾಂಗ್ರೆಸ್ ಅಭ್ಯರ್ಥಿ ಎಂ. ಲಕ್ಷ್ಮಣ್ ನಡುವೆ ಮಾತ್ರ ತೀವ್ರ ಸ್ಪರ್ಧೆ ಏರ್ಪಟ್ಟಿದೆ. ರಾಜ್ಯ ಕಾಂಗ್ರೆಸ್ ಘಟಕದ ಪ್ರಧಾನ ಕಾರ್ಯದರ್ಶಿಯಾಗಿರುವ ಎಂ. ಲಕ್ಷ್ಮಣ್ ಇದೇ ಮೊದಲ ಬಾರಿಗೆ ಸ್ಪರ್ಧಿಸಿದ್ದರು.

ಈ ಬಾರಿಯ ಚುನಾವಣೆಯಲ್ಲಿ ಕಾಂಗ್ರೆಸ್–ಬಿಜೆಪಿ ನಡುವೆ ತೀವ್ರ ಪೈಪೋಟಿಯಿದ್ದರೂ ಬಿಜೆಪಿಯ ಯದುವೀರ್ ಒಡೆಯರ್?ಗೆ ಭಾರೀ ಅಂತರದಲ್ಲಿ ಬಿಜೆಪಿ ಅಭ್ಯರ್ಥಿ ಯಧುವೀರ್ ಭರ್ಜರಿ ಗೆಲುವುಸಾಧಿಸಿ ದ್ದಾರೆ.

ಮೈಸೂರು ಕೊಡಗು ಕ್ಷೇತ್ರದಲ್ಲಿ ಬಿಜೆಪಿ ಕಡೆಯಿಂದ ದಾಖಲೆ ಯದುವೀರ್ ಬರೆಡಿದ್ದಾರೆ.ಪಕ್ಷದ ವತಿಯಿಂದ ಅತಿ ಹೆಚ್ಚು ಮತಗಳ ಅಂತರದಲ್ಲಿ ಗೆದ್ದ ದಾಖಲೆ ಯದುವೀರ್ ಬರೆದಿದ್ದಾರೆ.

ಕಾಂಗ್ರೆಸ್ ನ ಲಕ್ಷ್ಮಣ್ ವಿರುದ್ಧ 1,39,262 ಮತಗಳ ಅಂತರದ ಗೆಲುವು ಸಾಧಿಸಿದ್ದಾರೆ.

2019ರಲ್ಲಿ ಪ್ರತಾಪ್ ಸಿಂಹಗೆ 1,38,647 ಅಂತರದಲ್ಲಿ ಗೆಲುವು ಸಾಧಿಸಿದ್ದರು. ಬಿಜೆಪಿ ಅಭ್ಯರ್ಥಿ ಯದುವೀರ್ ಅವರು ಪಡೆದ ಮತ– 7,95,503, ಸೋತವರು – ಕಾಂಗ್ರೆಸ್ ಅಭ್ಯರ್ಥಿ ಎಂ. ಲಕ್ಷ್ಮಣ್ ಪಡೆದ ಮತ – 6,56,241 ಆಗಿದೆ.

ಸರ್ಕಾರಿ ಕೈಗಾರಿಕೆ ತರಬೇತಿ ಸಂಸ್ಥೆಯ ಪ್ರವೇಶಕ್ಕೆ ಅರ್ಜಿ ಅಹ್ವಾನ

ಮೈಸೂರು: ತಿ.ನರಸೀಪುರ ತಾಲ್ಲೂಕಿನ ತಲಕಾಡು ಗ್ರಾಮದಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2024–25ನೇ ಸಾಲಿನ ಪ್ರವೇಶಾತಿಗಾಗಿ ವಿವಿಧ ವೃತ್ತಿಗಳಿಗೆ ಎಸ್.ಎಸ್.ಎಲ್.ಸಿ. ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಆನ್–ಲೈನ್ ಮುಖಾಂತರ ಅಥವಾ ಖುದ್ದಾಗಿ ಕಛೇರಿಗೆ ಭೇಟಿ ನೀಡಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಎರಡು ವರ್ಷದ ಎಲೆಕ್ಟ್ರೀಷಿಯನ್, ಫಿಟ್ಟರ್, ಮೆಕಾನಿಕ್ ಎಲೆಕ್ಟ್ರಿಕ್ ವೆಹಿಕಲ್ ಹಾಗೂ ಅಡ್ವಾನ್ಸ್ಡ್ ಸಿಎನ್‌ಸಿ ಮೆಷ್ಯೆನಿಂಗ್ ಟೆಕ್ನೀಷಿಯನ್ ಕೋರ್ಸ್‌ಗಳು ಲಭ್ಯವಿದ್ದು, ವೆಬ್‌ಸೈಟ್ ಮೂಲಕ http://cite.karnataka.gov.in ಅರ್ಜಿ ಸಲ್ಲಿಸಬಹುದಾಗಿದ

ಕಾಯಕಯೋಗಿ

05–06–2024
ಬುಧವಾರ



ಚಾಮರಾಜನಗರ:–ತಾಲೂಕಿನ ಜನ್ನೂರು ಗ್ರಾಮದಲ್ಲಿ ಭಾನುವಾರ ರಾತ್ರಿ ಸುರಿದ ಬಿರುಗಾಳಿ ಮಳೆಗೆ ಆಲೆಮನೆಯ ಮೇಲ್ಛಾವಣಿ ಹಾರಿ ಹೋಗಿದೆ. ಗ್ರಾಮದ ಶಿವಯ್ಯ ಎಂಬು ವವರಿಗೆ ಸೇರಿದ ಆಲೆಮನೆಗೆ ಹಾಕಲಾಗಿದ್ದ ೨೦–೬೦ ಕಲ್ನಾರ್ ಶೀಟ್‌ಗಳು ಹಾರಿ ಹೋಗಿವೆ. ಶಿವಯ್ಯ ಅವರು ತಮ್ಮ ಜಮೀನಿನಲ್ಲಿ ಕಬ್ಬು ಬೆಳೆದು ಆಲೆಮನೆ ಯಲ್ಲಿ ಸಾವಯವ ಬೆಲ್ಲ ತಯಾ ರಿಸಿ ಮಾರಾಟ ಮಾಡುತ್ತಿದ್ದರು.ಈ ಸಂಬಂಧ ತಹಸೀಲ್ದಾರ್, ಕಂದಾಯ ನಿರೀಕ್ಷಕ, ಗ್ರಾಮಲೆ ಕ್ಕಿಗರ ಗಮನಕ್ಕೆ ತಂದಿದ್ದರೂ ಯಾವೊಬ್ಬ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿಲ್ಲ. ಆಲೆಮನೆಯನ್ನು ನಂಬಿ ಜೀವನ ನಡೆಸುತ್ತಿದ್ದ ಶಿವಯ್ಯ ಅವರಿಗೆ ಸೂಕ್ತ ಪರಿಹಾರ ಕೊಡಬೇಕು ಎಂದು ರೈತ ಸಂಘದ ಮುಖಂಡರು ಆಗ್ರಹಿಸಿದ್ದಾರೆ

ಪ್ರಕಾಶ ಭವನದಲ್ಲಿ ಇಂದು ಪರ್ಯಾವರಣ ದಿನಾಚರಣೆ



ಚಾಮರಾಜನಗರ: ಅಂತರಾಷ್ಟ್ರೀಯ ಆಧ್ಯಾತ್ಮಿಕ ಸಂಸ್ಥೆ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಸಂಜೀವಿನಿ ಟ್ರಸ್ಟ್ ಇವರ ಸಂಯುಕ್ತ ಆಶ್ರಯದಲ್ಲಿ ಪ್ರಕಾಶಭವನದಲ್ಲಿಂದು ಮಧ್ಯಾಹ್ನ 2:30ಕ್ಕೆ ಪರ್ಯಾವರಣ ದಿನಾಚರಣೆಯನ್ನು ಆಚರ ಆಚರಿಸಲಾಗುವುದೆಂದು ಸಂಸ್ಥೆ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶ್ರೀ ಈಶ್ವರ ರವರು ನೆರವೇರಿಸಲಿದ್ದಾರೆ. ಉದ್ದಾನೇಶ್ವರ ವಿರಕ್ತ ಮಠದ ಇಮ್ಮಡಿ ಉದ್ದಾನ ಸ್ವಾಮಿಗಳವರು ಆಶೀರ್ವಚನ ನೀಡಲಿದ್ದಾರೆ ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಜಯೋಗಿನಿ ಬ್ರಹ್ಮಾಕುಮಾರಿ ದಾನೇಶ್ವರೀಜಿಯವರು ಅಧ್ಯಕ್ಷತೆ ವಹಿಸಲಿದ್ದಾರೆ ಮುಖ್ಯ ಅತಿಥಿಗಳಾಗಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಶ್ರೀಮತಿ ಸಭ್ಯಶ್ರೀ ರವರು, ರಾಮಶೇಷ ಪಾಠ ಶಾಲೆಯ ಪ್ರಾಂಶುಪಾಲರಾದ ಶ್ರೀ ಆರ್ ಪ್ರದೀಪ್ ಕುಮಾರ್ ದೀಕ್ಷಿತ್ ರವರು ಹಾಗೂ ಶ್ರೀ ಮನೋಜ್ ರವರು ಭಾಗವಹಿಸಲಿದ್ದಾರೆ. ಪರಿಸರ ಪ್ರೇಮಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಸೂಚಿಸಲಾಗಿದೆ



ಗುಂಡ್ಲುಪೇಟೆ:– ಪಟ್ಟಣದ ಕಾಂಗ್ರೆಸ್ ಕಚೇರಿ ಮುಂಭಾಗದಲ್ಲಿ ಲೋಕಸಭಾ ಚಾಮರಾಜನಗರ ಮೀಸಲು ಕ್ಷೇತ್ರದಲ್ಲಿ ಸ್ಪರ್ಧೆ ಮಾಡಿದ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಜಯಭೇರಿ ಭಾರಿಸಿದ ಹಿನ್ನೆಲೆಯಲ್ಲಿ ಸಂಭ್ರಮಾಚರಣೆ ಮಾಡಿದರು. ಈ ಸಂದರ್ಭದಲ್ಲಿ ಹಿರಿಯ ಕಾಂಗ್ರೆಸ್ ಮುಖಂಡರು ಕಿರಿಯ ಮುಖಂಡರು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಅಭಿಮಾನಿಗಳು ಉಪಸ್ಥಿತರಿದ್ದರು.

ಭರ್ಜರಿ ಗೆಲುವು ಸಾಧಿಸಿದ ಸುನೀಲ್ ಬೋಸ್



ಕಾಯಕಯೋಗಿ ಸುದ್ದಿ

ಚಾಮರಾಜನಗರ: ಮೀಸಲು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನಿಲ್ ಬೋಸ್ ರವರು 1,85 ಲಕ್ಷ ಅಧಿಕ ಮತಗಳ ಅಂತರದಿಂದ ಭರ್ಜರಿ ಜಯಗಳಿಸಿದ್ದಾರೆ ಮುಖ್ಯಮಂತ್ರಿ ಸಿದ್ದರಾಮಯ್ಯ ತವರು ಕ್ಷೇತ್ರ ಚಾಮರಾಜನಗರ ಮೀಸಲು ಕ್ಷೇತ್ರದಲ್ಲಿ ಬರುವುದರಿಂದ ಈ ಬಾರಿ ಚಾಮರಾಜನಗರ ಮೀಸಲು ಕ್ಷೇತ್ರದ ಮೇಲೆ ಹೆಚ್ಚಿನ ನಿಗಾವಹಿಸಲಾಗಿತ್ತು. ಕಳೆದ ಬಾರಿ ಅಲ್ಪ ಮತಗಳ ಅಂತರದಿಂದ ದಿ. ಶ್ರೀನಿವಾಸ್ ಪ್ರಸಾದ್ ರವರು ಬಿಜೆಪಿ ಪಕ್ಷದಿಂದ ಜಯಗಳಿಸಿದ್ದರು. ಸತತ ಎರಡು ಬಾರಿ ಸಂಸದರಾಗಿದ್ದ ದಿ. ಆರ್ ಧ್ರುವ ನಾರಾಯಣ್ ರವರು ಮೂರನೇ ಬಾರಿಗೆ ಗೆಲ್ಲುವ ಹುಮ್ಮಸ್ಸಿನಲ್ಲಿದ್ದರು ಆದರೆ ಅಲ್ಪ ಮತಗಳ ಅಂತರದಿಂದ ಸೋಲುವಂತಾಗಿತ್ತು. ಚುನಾವಣೆಯಲ್ಲಿ ಪರಾಭವಗೊಂಡರು ಉತ್ತಮ ಸಂಘಟನೆ ಮಾಡುವ ಮೂಲಕ ತನ್ನದೇ ಹಿಡಿತ ಹೊಂದಿದ್ದರು. ಆದರೆ ಕಳೆದ ವರ್ಷ ಅವರು ಮೃತಪಟ್ಟ ನಂತರ ಕಾಂಗ್ರೆಸ್ ಪಕ್ಷದ ಸಮರ್ಥ ಅಭ್ಯರ್ಥಿಗಾಗಿ ಹುಡುಕಾಟ ನಡೆಯುತ್ತಲೆ ಇತ್ತು.

ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆ ಸಚಿವ ಹೆಚ್ ಸಿ ಮಹದೇವಪ್ಪ ರವರ ಪುತ್ರ ಸುನೀಲ್ ಬೋಸ್ ಮಾಜಿ ಶಾಸಕ ಜಿಎನ್ ನಂಜುಂಡಸ್ವಾಮಿ ಸ್ವಾಮಿ, ಜೆ.ಸಿ ಕಿರಣ್, ಡಿ ನಟರಾಜು ಹಾಗೂ ಇನ್ನಿತರರು ಪ್ರಬಲ ಆಕಾಂಕ್ಷಿಗಳಾಗಿದ್ದರು.

ನಾಮಪತ್ರ ಸಲ್ಲಿಸಲು ಎರಡು ದಿನಗಳು ಇದ್ದಾಗ ಕಾಂಗ್ರೆಸ್ ಪಕ್ಷದ ವರಿಷ್ಠರು ಸಚಿವರ ಪುತ್ರ ಸುನಿಲ್ ಬೋಸ್ ರವರಿಗೆ ಟಿಕೆಟ್ ಘೋಷಣೆ ಮಾಡಿದ್ದರು.

ಜೊತೆಗೆ ಪ್ರಬಲ ಆಕಾಂಕ್ಷಿಯಾಗಿದ್ದ ನಂಜುಂಡಸ್ವಾಮಿಯವರನ್ನು ಮನವೊಲಿಸಿ ಪ್ರಚಾರ ಸಭೆಗೆ ಕರೆತಂದಿದ್ದು ಯಶಸ್ವಿಯಾಗಿದೆ ಎನ್ನಬಹುದು.

ಹನೂರು ವಿಧಾನಸಭಾ ಕ್ಷೇತ್ರದಿಂದ ಹೆಚ್ಚಿನ ಲೀಡ್: ಚಾಮರಾಜನಗರ ಮೀಸಲು ಕ್ಷೇತ್ರದ ಎಂಟು ವಿಧಾನಸಭಾ ಕ್ಷೇತ್ರಗಳ ಪೈಕಿ ಏಳು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಶಾಸಕರಿದ್ದಾರೆ ಆದರೆ ಹನೂರು ವಿಧಾನಸಭಾ ಕ್ಷೇತ್ರದಲ್ಲಿ ಜೆಡಿಎಸ್ ಶಾಸಕರಿದ್ದರು. ಮಾಜಿ ಶಾಸಕ ಆರ್ ನರೇಂದ್ರ ರವರ ಪರಿಶ್ರಮದಿಂದ ಮುಖ್ಯಮಂತ್ರಿಗಳು , ಸಚಿವರು ಹಾಗೂ ನಿಗಮದ ಅಧ್ಯಕ್ಷರು ಶಾಸಕರುಗಳ ಕ್ಷೇತ್ರಕ್ಕಿಂತ 37001 ಮತಗಳ ಹೆಚ್ಚಿನ ಲೀಡ್ ಕೊಡಿಸಿದ್ದಾರೆ.

ಸಚಿವರ ಕ್ಷೇತ್ರದಲ್ಲಿಯೇ ಬಿಜೆಪಿಗೆ ಲೀಡ್: ಸಮಾಜ ಕಲ್ಯಾಣ ಇಲಾಖೆಯ ಸಚಿವ ಎಸ್ ಸಿ ಮಹದೇವಪ್ಪ ಸ್ವ ಕ್ಷೇತ್ರದಲ್ಲಿಯೇ ಬಿಜೆಪಿ ಪಕ್ಷಕ್ಕೆ ನೂರು ಮತಗಳ ಲೀಡ್ ಬಂದಿರುವುದು ತೀವ್ರ ಚರ್ಚೆಗೆ ಗ್ರಾಸವಾಗಿದೆ. ಇನ್ನು

ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಯಾಗಿದ್ದ ಸುನಿಲ್ ಬೋಸ್ ರವರು ಆಶ್ರಯ ಸಮಿತಿ ಅಧ್ಯಕ್ಷರಾಗಿ ಕ್ಷೇತ್ರದಲ್ಲಿ ಹೆಚ್ಚಿನ ಅಭಿವೃದ್ಧಿಗೆ ಒತ್ತು ನೀಡಿದ್ದರು ಆದರೂ ಉಳಿದ ಏಳು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಹೆಚ್ಚಿನ ಲೀಡ್ ಬಂದಿದ್ದರೆ, ಟಿ. ನರಸೀಪುರ ಕ್ಷೇತ್ರದಲ್ಲಿ ಬಿಜೆಪಿಗೆ ಲೀಡ್ ಬಂದಿರುವುದು ಆಶ್ಚರ್ಯ ತಂದಿದೆ.

ಕ್ಷೇತ್ರವಾರು ಲೀಡ್: ಚಾಮರಾಜನಗರ ಮೀಸಲು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನಿಲ್ ಬೋಸ್ ರವರಿಗೆ ಹನೂರು ವಿಧಾನಸಭಾ ಕ್ಷೇತ್ರದಲ್ಲಿ 37001, ವರುಣ ವಿಧಾನಸಭಾ ಕ್ಷೇತ್ರದಿಂದ 33173, ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದಿಂದ 33016, ಎಚ್ ಡಿ ಕೋಟೆ ವಿಧಾನಸಭಾ ಕ್ಷೇತ್ರದಿಂದ 23778 ನಂಜನಗೂಡು ವಿಧಾನಸಭಾ ಕ್ಷೇತ್ರದಿಂದ 20526, ಚಾಮರಾಜನಗರ ವಿಧಾನಸಭಾ ಕ್ಷೇತ್ರದಿಂದ 20374, ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದಿಂದ 18038 ಮತಗಳ ಮುನ್ನಡೆ ದೊರಕಿದೆ.

ಒಟ್ಟಾರೆ ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಭರ್ಜರಿ ಜಯಗಳಿಸಿರುವುದು ಮುಖ್ಯಮಂತ್ರಿ ಸಿದ್ದರಾಮಯ್ಯರವರಿಗೆ ಸಮಾಧಾನ ತಂದಿದೆ.

ಬೆಂಬಲಿಗರ ವಿಜಯೋತ್ಸವ: ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ರವರು ಜಯಗಳಿಸುತ್ತಿದ್ದಂತೆ ಮತ ಕೇಂದ್ರದ ಮುಂಭಾಗ ಜಮಾಯಿಸಿದ್ದ ಸಾವಿರಾರು ಕಾಂಗ್ರೆಸ್ ಕಾರ್ಯಕರ್ತರು ಮುಖಂಡರುಗಳು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್, ಸಚಿವ ಹೆಚ್. ಸಿ ಮಹದೇವಪ್ಪ , ವೆಂಕಟೇಶ್, ಹಾಗೂ ಶಾಸಕರು ಮಾಜಿ ಶಾಸಕರುಗಳಿಗೆ ಜೈಕಾರ ಹಾಕಿ ಸಂಭ್ರಮಿಸಿದರು.

ಕಾಂಗ್ರೆಸ್ ಕಾರ್ಯಕರ್ತರ ವಿಜಯೋತ್ಸವ

ಕಾಯಕಯೋಗಿ ಸುದ್ದಿ

ಚಾಮರಾಜನಗರ: ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಹೆಚ್ಚಿನ ಅಂತರದಲ್ಲಿ ಮುನ್ನಡೆ ಸಾಧಿಸುತ್ತಿದ್ದಂತೆ ಮತ ಎಣಿಕೆ ಕೇಂದ್ರದ ಹೊರಗೆ ಜಮಾಯಿಸಿದ ಸಾವಿರಾರು ಕಾಂಗ್ರೆಸ್ ಕಾರ್ಯಕರ್ತರು ಸಂಭ್ರಮಿಸಿದರು.

ಮತ ಎಣಿಕೆ ಕೇಂದ್ರದ ಮುಖ್ಯಗೇಟ್ ಹಾಗೂ ಇತರೆ ಕಡೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸಿದ ಕಾಂಗ್ರೆಸ್ ಕಾರ್ಯಕರ್ತರು ಸುನೀಲ್ ಬೋಸ್ ಪರ ಘೋಷಣೆ ಕೂಗಿದರು. ಕಾಂಗ್ರೆಸ್ ಬಾವುಟ ಹಿಡಿದು ಹಾಗೂ ಗೆಲುವಿನ ಚಿಹ್ನೆ ತೋರಿಸಿ ಸಂಭ್ರಮಿಸಿದರು. ಬಿರು ಬಿಸಿಲಲ್ಲಿಯೂ ನಿಂತು ಮತ ಎಣಿಕೆಯ ಮಾಹಿತಿಯನ್ನು ಪಡೆದರು.

ಮತ ಎಣಿಕೆ ಕೇಂದ್ರದ ಬಳಿ ಇದ್ದ ಮರಗಳ ನೆರಳಿನ ಆಶ್ರಯದಲ್ಲಿ ನಿಂತು ಘೋಷಣೆ ಕೂಗಿದರು. ಮತ ಎಣಿಕೆ ಬಳಿ ಪಕ್ಷದ ಕಾರ್ಯಕರ್ತರು, ಜನರಿಗೆ ಕುಡಿಯುವ ನೀರು, ತಿಂಡಿ ವ್ಯವಸ್ಥೆ ಮಾಡಲಾಗಿತ್ತು. ಅಲ್ಲದೇ ಜಿಲ್ಲೆಯ ಚಾಮರಾಜನಗರ, ಕೊಳ್ಳೇಗಾಲ, ಯಳಂದೂರು, ಗುಂಡ್ಲುಪೇಟೆ, ಹನೂರು ತಾಲೂಕು ವ್ಯಾಪ್ತಿಯಲ್ಲೂ ಕಾಂಗ್ರೆಸ್ ಕಾರ್ಯಕರ್ತರು ಸಂಭ್ರಮಾಚರಣೆ ಮಾಡಿದರು.

'ಬದುಕನ್ನು ಕಟ್ಟುವ ಶಕ್ತಿ ತಾಯಿಯರಿಗಿದೆ'

ತುಮಕೂರು: ದಿ.04 ಮಂಗಳವಾರ ಸಂಜೆ 5 ಗಂಟೆಗೆ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪಕರು ಮತ್ತು ಮೈಸೂರಿನ ಮಹಾರಾಜರೂ ಆಗಿದ್ದ ರಾಜಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿಯನ್ನು ಕನ್ನಡ ಭವನದಲ್ಲಿ ತುಮಕೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಏರ್ಪಡಿಸಿದೆ.

ಸಮಾರಂಭದ ಅಧ್ಯಕ್ಷತೆಯನ್ನು ಜಿಲ್ಲಾ ಕ.ಸಾ.ಪ. ಅಧ್ಯಕ್ಷರಾದ ಕೆ.ಎಸ್.ಸಿದ್ಧಲಿಂಗಪ್ಪನವರು ವಹಿಸುವರು. ಈ ಸಂದರ್ಭದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್‌ರವರನ್ನು ಕುರಿತು ವಿಶೇಷ ಉಪನ್ಯಾಸವನ್ನು ಸಾಹಿತಿಗಳಾದ ಲಕ್ಷ್ಮೀಕಾಂತರಾಜೇ ಅರಸ್ ಮಾಡುವರು. ಎಲ್ಲ ಕನ್ನಡ ಸಾಹಿತ್ಯಪರಿಷತ್ತಿನ ಆಜೀವ ಸದಸ್ಯರುಗಳು ಹಾಗೂ ಕನ್ನಡಾಭಿಮಾನಿಗಳು ಭಾಗವಹಿಸಬೇಕೆಂದು ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿಗಳಾದ ಡಾ. ಡಿ.ಎನ್.ಯೋಗೀಶ್ವರಪ್ಪನವರು ತಿಳಿಸಿದ್ದಾರೆ.



ತುಮಕೂರು ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಕಾರ್ಯಕರ್ತರಿಂದ ಸಂಭ್ರಮಾಚರಣೆ

ಕಾಯಕಯೋಗಿ ಸುದ್ದಿ

ತುಮಕೂರು: ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ವಿ. ಸೋಮಣ್ಣ ಗೆಲುವಿನ ಹಿನ್ನೆಲೆಯಲ್ಲಿ ಕೊರಟಗೆರೆ ಬಿಜೆಪಿ ಕಾರ್ಯಕರ್ತರಿಂದ ಸಂಭ್ರಮಾಚರಣೆ ನಡೆಯಿತು..

ಬಿಜೆಪಿ ಮುಖಂಡ ಬಿ.ಹೆಚ್. ಅನಿಲ್ ಕುಮಾರ್ ಹಾಗೂ ಜೆಡಿಎಸ್ ಮುಖಂಡ ನರಸಿಂಹರಾಜು ನೇತೃತ್ವದಲ್ಲಿ ಸಂಭ್ರಮಾಚರಣೆ ನಡೆಯಿತು. ಕೊರಟಗೆರೆ ಪಟ್ಟಣದ ಕೆ ಎಸ್ ಆರ್ ಟಿ ಸಿ ಬಸ್ ನಿಲ್ದಾಣದಿಂದ ಪಾಂಚಜನ್ಯ ಕಛೇರಿಯವರೆಗೂ ಮುಖ್ಯ ರಸ್ತೆಯಲ್ಲಿ ಬೈಕ್ ರ್ಯಾಲಿ ನಡೆಸುವ ಮೂಲಕ ಕಾರ್ಯಕರ್ತರು ಸಂಭ್ರಮಾಚರಣೆ ಮಾಡಿದರು.

ನಂತರ ಪಾಂಚಜನ್ಯ ಕಛೇರಿಯಲ್ಲಿ ಕಾರ್ಯಕರ್ತರ ಸಭೆ ನಡೆಸಿದ ಬಿಜೆಪಿ ಮುಖಂಡ ಅನಿಲ್ ಕುಮಾರ್ ಹಾಗೂ ಜೆಡಿಎಸ್ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ನರಸಿಂಹರಾಜು, "ಈ ಬಾರಿ ನಾವು ಕೊರಟಗೆರೆ ಕ್ಷೇತ್ರದಿಂದ ಸುಮಾರು 25 ಸಾವಿರ ಅಂತರ ನೀಡಿದ್ದೇವೆ. ಇದೇ ರೀತಿ ನಾವು ಮುಂದಿನ ದಿನಗಳಲ್ಲಿ ಕೆಲಸ ಮಾಡಿದರೆ ಕೊರಟಗೆರೆ ಕ್ಷೇತ್ರದ ಧೂಳಿಪಟ ಮಾಡುತ್ತೇವೆ. ಆದ್ದರಿಂದ ಇದೇ ರೀತಿ, ಎರಡೂ ಪಕ್ಷಗಳು ಪವಿತ್ರ ಮೈತ್ರಿ ಮಾಡಿಕೊಳ್ಳುವ ಮೂಲಕ ಸ್ಥಳೀಯ ಚುನಾವಣೆಯಲ್ಲಿ ಜಯಭೇರಿ ಬಾರಿಸುತ್ತೇವೆ. ಜಿಲ್ಲೆಯಲ್ಲಿ ನಾವು ಬಹಳ ಹೆಚ್ಚು ಅಂತರ ನೀಡಿದ್ದೇವೆ. ಇದು ಕಾಂಗ್ರೆಸ್ ಪಕ್ಷ ಊಹಿಸಲು ಸಾಧ್ಯವಿಲ್ಲದಷ್ಟು ನಾವು ಅಂತರ ನೀಡಿದ್ದೇವೆ" ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಮುಖಂಡರಾದ ಬಿಜೆಪಿ ಬಿ ಹೆಚ್ ಅನಿಲ್ ಕುಮಾರ್, ಜೆಡಿಎಸ್ ಪಕ್ಷದ ನರಸಿಂಹರಾಜು, ಮಂಡಲ ಅಧ್ಯಕ್ಷ ದರ್ಶನ್ ,ರಮೇಶ್, ಪಟ್ಟಣ ಪಂಚಾಯತಿ ಸದಸ್ಯರಾದ ಪುಟ್ಟನರಸಪ್ಪ, ಪ್ರದೀಪ್ ಕುಮಾರ್, ಲಕ್ಷ್ಮಿ ನಾರಾಯಣ್, ಮುಖಂಡರಾದ ಪ್ರಕಾಶ್, ರಘು,ಮಹೇಶ್, ಕಾಫಿ ಪುಡಿ ಅಪ್ಪಿ, ಆನಂದ್, ಚೇತನ್, ಸೇರಿದಂತೆ ಜೆಡಿಎಸ್ ಹಾಗೂ ಬಿಜೆಪಿ ಪಕ್ಷದ ಕಾರ್ಯಕರ್ತರು ಮುಖಂಡರು ಹಾಜರಿದ್ದರು..

ನಾಳೆ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಫಲಿತಾಂಶ ಪ್ರಕಟ

ಆಗ್ನೇಯ ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಚುನಾವಣೆಯಲ್ಲಿ ಶೇ.94 ರಷ್ಟು ಮತದಾನ

ಕಾಯಕಯೋಗಿ ಸುದ್ದಿ

ಕೊರಟಗೆರೆ: ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಮತದಾನವು ಪಟ್ಟಣದ ತಾಲೂಕು ಕಚೇರಿಯಲ್ಲಿ ಸೋಮವಾರ ಬಿರುಸಾಗಿ ನಡೆಯಿತು. ಈ ಚುನಾವಣೆಯಲ್ಲಿ ಒಟ್ಟು 15ಮಂದಿ ಅಭ್ಯರ್ಥಿಗಳು ಸ್ಪರ್ಧೇ ಮಾಡಿದ್ದಾರೆ. ಬೆ.8ಕ್ಕೆ ಆರಂಭವಾದ ಚುನಾವಣೆ ಸಂಜೆ 4ಕ್ಕೆ ಮುಕ್ತಾಯವಾಯಿತು.

ಈ ಚುನಾವಣೆಯಲ್ಲಿ ಮತದಾನ ಮಾಡುವಂತಹ ಒಟ್ಟು ಶಿಕ್ಷಕರು 344, ಇದರಲ್ಲಿ ಪುರುಷರು 248, ಮಹಿಳೆಯರು 96 ಇದ್ದಾರೆ. ಈ ಬಾರಿ ಶೇ.94 ರಷ್ಟು ಮತದಾನವಾಗಿದೆ. ಕಾಂಗ್ರೆಸ್ ಅಭ್ಯರ್ಥಿ ಡಿ.ಟಿ ಶ್ರೀನಿವಾಸ್ ಮತ್ತು ಎನ್‌ಡಿಎ ಪಕ್ಷದ ಅಭ್ಯರ್ಥಿ ವೈ.ಎ ನಾರಾಯಣಸ್ವಾಮಿಗೆ ಮತದಾನದ ವೇಳೆ ಬಿಗ್ ಫೈಟ್ ಶುರುವಾಗಿತ್ತು.

ಎರಡು ಪಕ್ಷದ ಕಾರ್ಯಕರ್ತರು ತಮ್ಮ ಪಕ್ಷದ ಅಭ್ಯರ್ಥಿಗಳ ಪರವಾಗಿ ಮತದಾನ ಮಾಡುವಂತೆ ತಿಳಿಸಿದರು. ಇದು ಶಿಕ್ಷಕರ ಕ್ಷೇತ್ರದ ಚುನಾವಣೆ ಆಗಿರುವುದರಿಂದ ಯಾವುದೇ ಅಹಿತಕರ ಘಟನೆ ನಡೆಯದಂತೆ ತಾಲೂಕು ಆಡಳಿತ ಚುನಾವಣಾ ಕೇಂದ್ರದ ಬಳಿ



ಪೋಲಿಸ್ ಬಿಗಿ ಬಂದೋಬಸ್ತ್‌ನ್ನು ನೇಮಿಸಿತ್ತು.

ತಹಶೀಲ್ದಾರ್ ಕೆ.ಮಂಜುನಾಥ್ ಮಾತನಾಡಿ, ಆಗ್ನೇಯ ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಚುನಾವಣೆಯ ಮತದಾನವು ಬೆ.8ರಿಂದ ಸಂಜೆ 4ಗಂಟೆಯವರೆಗೆ ನಡೆದಿದೆ. ಒಟ್ಟು 344ಮತದಾರರಲ್ಲಿ ಪುರುಷರು 232, ಮಹಿಳೆಯರು 92ಮಂದಿ ಮತದಾನ ಮಾಡಿದ್ದು ಒಟ್ಟು 324 ಶಿಕ್ಷಕ ಮತದಾರರು ತಮ್ಮ ಹಕ್ಕನ್ನು ಚಲಾಯಿಸಿದ್ದಾರೆ. ಚುನಾವಣಾ ಆಯೋಗದ ಸೂಚನೆಯಂತೆ ಆಹಿತಕರ ಘಟನೆ ನಡೆಯದಂತೆ ಮುಂಜಾಗ್ರತಾ ಕ್ರಮವಹಿಸಿ ಚುನಾವಣಾ ಕೇಂದ್ರದ ಬಳಿ ಪೋಲಿಸ್ ಇಲಾಖೆಯಿಂದ ಬಿಗಿ ಬಂದೋಬಸ್ತ್ ಮಾಡಲಾಗಿತ್ತು.

ಚುನಾವಣಾ ಅಂಗವಾಗಿ ಸಾರ್ವಜನಿಕರ ಕೆಲಸಗಳಿಗಾಗಿ ಇಂದು ಸಿಬ್ಬಂದಿಗಳನ್ನು ನೇಮಿಸಿದ್ದು ಅವರು ಸಹ ಸಾರ್ವಜನಿಕರಿಗೆ ಪ್ರತಿಕ್ರಿಯಿಸಿ ಸಮಸ್ಯೆಗಳನ್ನು ಬಗೆಹರಿಸುವಲ್ಲಿ ಮುಂದಾಗಿದ್ದಾರೆ. ಮತದಾನವು ಬಿರುಸಾಗಿ ನಡೆಯುವುದರ ಮುಖಾಂತರ ಈ ದಿನದ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆ ಯಶಸ್ವಿಯಾಗಿದೆ, ಜೂ.6ಕ್ಕೆ ಈ ಚುನಾವಣೆಯ ಫಲಿತಾಂಶ ಪ್ರಕಟವಾಗುತ್ತದೆ ಎಂದು ಹೇಳಿದರು.

ತುಮಕೂರು ಲೋಕಸಭಾ ಚುನಾವಣೆ–2024:

ಬಿಜೆಪಿ ಅಭ್ಯರ್ಥಿ ವಿ.ಸೋಮಣ್ಣ ಗೆಲುವು

ತುಮಕೂರು: ತುಮಕೂರು ಲೋಕಸಭಾ ಚುನಾವಣೆ–2024ರ ಮತ ಎಣಿಕೆ ಕಾರ್ಯ ಇಂದು ಪೂರ್ಣಗೊಂಡಿದ್ದು, ಭಾರತೀಯ ಜನತಾಪಕ್ಷದ ಅಭ್ಯರ್ಥಿ ವಿ.ಸೋಮಣ್ಣ ಅವರು 7,20,946 ಮತಗಳನ್ನು ಪಡೆದು ಜಯಶೀಲರಾಗಿದ್ದಾರೆ.

ಎಸ್.ಪಿ. ಮುದ್ದಹನುಮೇಗೌಡ(ಇಂಡಿಯನ್ ನ್ಯಾಷನಲ್ ಕಾಂಗ್ರೆಸ್) ಪಡೆದ ಮತಗಳು : 128–ಚಿ.ನಾ.ಹಳ್ಳಿ 79,619; 129–ತಿಪಟೂರು 62,250; 130–ತುರುವೇಕೆರೆ 49,666; 132–ತುಮಕೂರು ನಗರ 85,417; 133–ತುಮಕೂರು ಗ್ರಾಮಾಂತರ 70,859; 134–ಕೊರಟಗೆರ



ಹಾಸನಾ ಲೋಕ ಸಭೆ ಕಾಂಗ್ರೆಸ್ ಅಭ್ಯರ್ಥಿ ಶ್ರೇಯಸ್ ಪಟೇಲ ವಿಜಯ ಸಾಧಿಸುತ್ತಿದ್ದಂತೆ ಕಾಂಗ್ರೆಸ್ ಕಾರ್ಯಕರ್ತರು ಪಡಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.



ಹಾಸನಾ ಲೋಕ ಸಭೆ ಕಾಂಗ್ರೆಸ್ ಅಭ್ಯರ್ಥಿ ಶ್ರೇಯಸ್ ಪಟೇಲರಿಗೆ ಜಿಲ್ಲಾಧಿಕಾರಿ ಪ್ರಮಾಣ ಪತ್ರ ನೀಡಿದರು.



ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಆಡಳಿತ ಸಮಯದಲ್ಲಿ ನಿರ್ಮಾಣವಾದ ವಿವಿಧ ಜಲಾಶಯಗಳು, ಬೃಹತ್ ಕೈಗಾರಿಕೆಗಳು, ನೂರಾರು ಶಾಲೆಗಳು ಕನ್ನಡಿಗರ ಬದುಕನ್ನು ಉಜ್ವಲಗೊಳಿಸಿವೆ. ಏಷ್ಯಾದಲ್ಲೇ ಪ್ರಥಮ ಬಾರಿಗೆ ಬೆಂಗಳೂರಿನಲ್ಲಿ ಬೀದಿ ದೀಪವನ್ನು ಬೆಳಗಿಸಿದ ಕೀರ್ತಿ ನಾಲ್ವಡಿ ಕೃಷ್ಣರಾಜರ ಒಡೆಯರಿಗೆ ಸಲ್ಲುತ್ತದೆ ಎಂದು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಬಿ.ಎನ್.ಕೃಷ್ಣಪ್ಪ ತಿಳಿಸಿದರು. ಎಂದರು. ರಬ್ಬನಹಳ್ಳಿ ಕೆಂಪಣ್ಣ, ಐಬಸಾಪುರ ಮೂರ್ತಿ ಜಿಲ್ಲಾಕಾರ್ಯದರ್ಶಿ ರಮೇಶ್ ಕುಮಾರ್, ತಾಲ್ಲೂಕು ಗೌರವಕಾರ್ಯದರ್ಶಿ, ಯಲಿಯೂರು ದೇವರಾಜ್ ತಾಲ್ಲೂಕು ಕೋಶಾಧ್ಯಕ್ಷ ಜೆ.ಎನ್. ರಾಮಾಂಜಿನಪ್ಪ, ಗಾಯಕ ಕನ್ನಡಿಗಪ್ರಭು, ಆಡಳಿತಮಂಡಳಿಯ ಉಪನ್ಯಾಸಕ ವಿಶಾಲ್, ಉಪನ್ಯಾಸಕರು, ಮತ್ತು ವಿದ್ಯಾರ್ಥಿ–ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

ಲೋಕಸಭೆ ಸಮರ

ಡಿ.ಕೆ. ಸುರೇಶ್ ಸೋಲು: ಪೊಲೀಸ್ ಬಂದೋಬಸ್ತ್

ಕಾಯಕಯೋಗಿ ಸುದ್ದಿ

ಕನಕಪುರ: ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ಡಿ.ಕೆ. ಶಿವಕುಮಾರ್ ಅವರ ತಮ್ಮ ಡಿ.ಕೆ. ಸುರೇಶ್ ರವರು ಭಾರಿ ಅಂತರದಿಂದ ಸೋಲನ್ನು ಅನುಭವಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಬೆಂಗಳೂರು ನಗರ ಸೇರಿ ಬೆಂಗಳೂರು ಗ್ರಾಮಾಂತರ ಕ್ಷೇತ್ರ ವ್ಯಾಪ್ತಿ ಪ್ರದೇಶಗಳಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ.

ಡಾ: ಮಂಜುನಾಥ್ ಸುಮಾರು ಎರಡು ಲಕ್ಷಗಳಿಗಿಂತ ಹೆಚ್ಚು ಮತಗಳ ಅಂತರ ಪಡೆದು ಜಯಗಳಿಸಿದ್ದಾರೆ. ಬಿಜೆಪಿ & ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿ ಚುನಾವಣೆ ಅಖಾಡಕ್ಕೆ ಇಳಿದ ಡಾ. ಮಂಜುನಾಥ್‌ಗೆ ಸಾಕಷ್ಟು ಸವಾಲು ಇದ್ದವು. ಇಷ್ಟೆಲ್ಲಾ ಸವಾಲುಗಳ ನಡುವೆ ಕೂಡ ಬಿಜೆಪಿ & ಜೆಡಿಎಸ್‌ನ ನಾಯಕರು ಒಗ್ಗಟ್ಟು ಪ್ರದರ್ಶನ ಮಾಡಿ ಡಾ. ಮಂಜುನಾಥ್ ಅವರ ಗೆಲುವಿಗೆ ಶ್ರಮವಹಿಸಿ ಪ್ರಚಾರ ನಡೆಸಿದ್ದರು. ಈ



ಹಿನ್ನೆಲೆಯಲ್ಲಿ ಆರಂಭದಲ್ಲೇ ಡಾ. ಮಂಜುನಾಥ್ ಅವರು ಗೆಲುವು ಸಾಧಿಸಿದ ಬೆಳವಣಿಗೆಯ ಬೆನ್ನಲ್ಲೇ ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಭದ್ರತೆ ಹೆಚ್ಚಿಸಲಾಗಿದೆ. ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರ ಭಾರತದ ಮೂಲೆ ಮೂಲೆಯಲ್ಲಿ ಸದ್ದು ಮಾಡಿ, ಸುದ್ದಿಯಾಗಿತ್ತು. ಯಾಕೆಂದರೆ ಈ ಕ್ಷೇತ್ರದಲ್ಲಿ ಸತತವಾಗಿ ಗೆದ್ದು ಬೀಗುತ್ತಿರುವ ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ. ಸುರೇಶ್ ಅವರನ್ನು ಕಟ್ಟಿಹಾಕಲು ನೇರ ಬಿಜೆಪಿ ಕೇಂದ್ರ ನಾಯಕರೆ ಸಿದ್ಧತೆ ಮಾಡಿದ್ದರು. ಅಲ್ಲದೆ ಜೆಡಿಎಸ್ ವರಿಷ್ಠ & ಎಚ್.ಡಿ. ದೇವೇಗೌಡರ ಅಳಿಯ ಡಾ.ಸಿ.ಎನ್. ಮಂಜುನಾಥ್ ಅವರನ್ನೇ ಡಿ.ಕೆ. ಸುರೇಶ್ ಅವರ ವಿರುದ್ಧ ಕಣಕ್ಕೆ ಇಳಿಸಿದ್ದರು. ಜಯದೇವ ಹೃದ್ರೋಗ ಆಸ್ಪತ್ರೆ ಮುಖ್ಯಸ್ಥರಾಗಿದ್ದ ಡಾ. ಮಂಜುನಾಥ್ ನಿವೃತ್ತಿ ಪಡೆದು ರಾಜಕೀಯಕ್ಕೆ ಬಂದರು. ಇಷ್ಟೆಲ್ಲಾ ಬೆಳವಣಿಗೆ ನಡುವೆ ಇದೀಗ ಡಿ.ಕೆ. ಸುರೇಶ್ ವಿರುದ್ಧ ಡಾ. ಮಂಜುನಾಥ್ ದೊಡ್ಡ ಗೆಲುವು ಕಂಡಿದ್ದಾರೆ.

ಕಾಯಕಯೋಗಿಸುದ್ದಿ

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ & ಬಿಜೆಪಿ ನೇರವಾಗಿ ಹಣಾಹಣಿ ನಡೆಸಿವೆ. ಅತ್ತ ಒಂದು ಕಡೆ ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ. ಸುರೇಶ್ ಅವರು ಸತತ 4ನೇ ಗೆಲುವಿನ ನಿರೀಕ್ಷೆ ಇಟ್ಟುಕೊಂಡಿದ್ದರೆ, ಮತ್ತೊಂದು ಕಡೆ ಬಿಜೆಪಿ & ಜೆಡಿಎಸ್ ನಾಯಕರು ಈ ಕ್ಷೇತ್ರದ ಮೇಲೆ ಹಿಡಿತ ಸಾಧಿಸಲು ಪ್ರಯತ್ನಿಸಿದ್ದರು. ಹೀಗಿದ್ದಾಗ ಗೆಲುವಿಗೆ ಹತ್ತಿರ ಇರುವುದು ಡಿ.ಕೆ. ಸುರೇಶ್ ಅವರು ಎಂಬ ಮಾತುಗಳು ಕೇಳಿಬಂದಿದ್ದವು, ಆದರೆ ಈಗ ನೋಡಿದರೆ ಡಾ. ಮಂಜುನಾಥ್ ರವರು ಗೆಲುವನ್ನು ಕಂಡಿದ್ದಾರೆ.

ಹಾಸನದಲ್ಲಿ ಪ್ರಜ್ವಲ್ ರೇವಣ್ಣಗೆ ಹೀನಾಯ ಸೋಲು, 25 ವರ್ಷಗಳ ನಂತರ ಕಾಂಗ್ರೆಸ್ ಗೆಲುವು



ಕಾಯಕಯೋಗಿ ಸುದ್ದಿ

ಹಾಸನ: ತೀವ್ರ ಕೂತುಹಲ ಮೂಡಿಸಿದ್ದ ಹಾಸನ ಲೋಕಸಭಾ ಕ್ಷೇತ್ರದ ಫಲಿತಾಂಶ ಹೊರಬಿದ್ದಿದ್ದು, ಮಾಜಿ ಪ್ರಧಾನಿ, ಜೆಡಿಎಸ್ ವರಿಷ್ಠ ಎಚ್.ಡಿ. ದೇವೇಗೌಡ ಅವರ ಮೊಮ್ಮಗ, ಜೆಡಿಎಸ್? – ಬಿಜೆಪಿ ಮೈತ್ರಿ ಅಭ್ಯರ್ಥಿ ಪ್ರಜ್ವಲ್ ರೇವಣ್ಣ ಅವರು ಹೀನಾಯವಾಗಿ ಸೋಲು ಅನುಭವಿಸಿದ್ದಾರೆ.

ಅಶ್ಲೀಲ ವಿಡಿಯೋ ಪ್ರಕರಣದಲ್ಲಿ ಜೈಲು ಪಾಲಾಗಿರುವ ಪ್ರಜ್ವಲ್ ರೇವಣ್ಣ ವಿರುದ್ಧ ಮಾಜಿ ಸಚಿವ, ದಿವಂಗತ ಜಿ. ಪುಟ್ಟಸ್ವಾಮಿಗೌಡರ ಮೊಮ್ಮಗ, ಕಾಂಗ್ರೆಸ್ ಅಭ್ಯರ್ಥಿ ಶ್ರೇಯಸ್ ಪಟೇಲ್? 50 ಸಾವಿರಕ್ಕೂ ಹೆಚ್ಚು ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಇದರೊಂದಿಗೆ ಹಾಸನದಲ್ಲಿ 25 ವರ್ಷಗಳ ನಂತರ ಕಾಂಗ್ರೆಸ್ ಗೆಲುವು ಸಾಧಿಸಿದೆ.

ಮತದಾನಕ್ಕೂ ಮೊದಲು ಹಂಚಿಕೆಯಾದ ಪ್ರಜ್ವಲ್ ರೇವಣ್ಣರದ್ದು ಎಂದು ಆರೋಪಿಸಲಾದ ಅಶ್ಲೀಲ ವಿಡಿಯೋ ಪ್ರಕರಣ ದೇಶಾದ್ಯಂತ ತೀವ್ರ ಸಂಚಲನಕ್ಕೆ ಕಾರಣವಾಗಿತ್ತು.

ಲೋಕಸಭಾ ಚುನಾವಣೆ ಮತ ಎಣಿಕೆ: ಪ್ರಜ್ವಲ್ ಸ್ಪರ್ಧಿಸಿರುವ ಹಾಸನದಲ್ಲಿ ಹೆಚ್ಚಿದ ಕುತೂಹಲ

ಲೋಕಸಭೆ ಚುನಾವಣೆಯ ನಡುವೆ ಭಾರತ ಮಾತ್ರವಲ್ಲದೇ ಅಂತರಾಷ್ಟ್ರೀಯ ಮಟ್ಟದಲ್ಲಿ ಭಾರೀ ಸದ್ದು ಮಾಡಿದ ಹಾಸನದ ಸಂಸದ ಪ್ರಜ್ವಲ್ ರೇವಣ್ಣ ಅವರ ಲೈಂಗಿಕ ದೌರ್ಜನ್ಯ ಹಾಗೂ ಪೆನ್‌ಡ್ರೈವ್ ಪ್ರಕರಣದ ನಡುವೆಯೇ ಅಲ್ಲಿನ ಫಲಿತಾಂಶ ಏನಾಗಬಹುದು ಎನ್ನುವ ಕುತೂಹಲ ಇದ್ದೇ ಇತ್ತು. ಇದೀಗ ಕುತೂಹಲಕ್ಕೆ ತೆರೆ ಬಿದ್ದಿದೆ.

ಅತಿಥಿ ಶಿಕ್ಷಕರ ಹುದ್ದೆಗೆ ಅರ್ಜಿ ಆಹ್ವಾನ

ರಾಮನಗರ: ರಾಮನಗರ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆ ಹಾಗೂ ಮೌಲಾನಾ ಆಜ಼ಾದ್ ಮಾದರಿ ಶಾಲೆಗಳಲ್ಲಿ ಖಾಲಿ ಇರುವ ವಿವಿಧ ವಿಷಯಗಳ ಶಿಕ್ಷಕರ ಹಾಗೂ ಉಪನ್ಯಾಸಕರ ಹುದ್ದೆಗೆ ಅತಿಥಿ ಶಿಕ್ಷಕರ / ಉಪನ್ಯಾಸಕರಿಂದ ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು, ಸಂಬಂಧಪಟ್ಟ ವಿಷಯದಲ್ಲಿ ಪದವಿ /ಸ್ನಾತಕೋತ್ತರ ಪದವಿ ಹಾಗೂ ಬಿಎಡ್/ಬಿಪಿಎಡ್ ಪದವಿ ಪಡೆದಿರುವುದು ಕಡ್ಡಾಯವಾಗಿರುತ್ತದೆ. ಅತಿಥಿ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಅಥವಾ ನಿವೃತ್ತ ಶಿಕ್ಷಕರು ಅರ್ಜಿ ಸಲ್ಲಿಸಬಹುದು. ಮೆರಿಟ್ ಹಾಗೂ ಅನುಭವವುಳ್ಳವರಿಗೆ ಆದ್ಯತೆ ನೀಡಲಾಗುವುದು. ಅಯ್ಕೆಯಾದ ಅತಿಥಿ ಶಿಕ್ಷಕರು / ಉಪನ್ಯಾಸಕರಿಗೆ ಗೌರವ ಸಂಭಾವನೆ ನೀಡಲಾಗುವುದು. ಆಸಕ್ತರು ತಮ್ಮ ಸ್ವ–ವಿವರವುಳ್ಳ ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ಸಂಬಂಧಪಟ್ಟ ಶಾಲೆಗಳು, ಕಾಲೇಜಿನಲ್ಲಿ ಪ್ರಾಂಶುಪಾಲರು, ಮುಖೋಪಾಧ್ಯಾಯರುಗಳಿಗೆ ಜೂ. 12 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಮಾಗಡಿಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರ ಮೊ.ನಂ. 9741555441, ಚನ್ನಪಟ್ಟಣದ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರ ಮೊ.ನಂ. 9741600867 ಅಥವಾ ಮಾಗಡಿಯ ಮೌಲಾನಾ ಅಜಾದ್ ಶಾಲೆಯ ಮುಖೋಪಾಧ್ಯಾಯರ ಮೊ.ನಂ. 9740778589 ಅನ್ನು ಸಂಪರ್ಕಿಸುವಂತೆ ರಾಮನಗರ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅದ್ಧೂರಿಯಾಗಿ ನಡೆದ ಆದಿ ಉಡಸಲಮ್ಮ ಪರ

ದೇವಸ್ಥಾನದ ನಿರ್ಮಾಣಕ್ಕೆ ೩೦ ಲಕ್ಷ ರೂ. ಅನುದಾನ ಘೋಷಣೆ ಮಾಡಿದ ಯೋಗೇಶ್ವರ್

ಕಾಯಕಯೋಗಿ ಸುದ್ದಿ

ಚನ್ನಪಟ್ಟಣ: ತಾಲೂಕಿನ ಬೇವೂರು ಗ್ರಾಮದ ಶಕ್ತಿ ದೇವತೆ ಶ್ರೀ ಆದಿ ಉಡಸಲಮ್ಮ ದೇವಿಯ ನೂತನ ದೇವಸ್ಥಾನದ ನಿರ್ಮಾಣಕ್ಕೆ ಚಾಲನೆ ನೀಡುವ ಪ್ರಯುಕ್ತ ಭಾನುವಾರ ಆಯೋಜಿಸಿದ್ದ ಪರದಲ್ಲಿ 20 ಸಾವಿರಕ್ಕೂ ಹೆಚ್ಚು ಭಕ್ತರು ಭಾಗವಹಿಸಿ ಪ್ರಸಾದ ಸ್ವೀಕಾರ ಮಾಡುವ ಮೂಲಕ ಪರವನ್ನು ಯಶಸ್ವಿಗೊಳಿಸಿದರು. ಇದೇ ವೇಳೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಸಿ.ಪಿ.ಯೋಗೇಶ್ವರ್‌ಅವರು ದೇವಸ್ಥಾನದ



ನಿರ್ಮಾಣದ ಕಾಮಗಾರಿಗೆ 25 ಲಕ್ಷ ರೂ. ಎಂಎಲ್‌ಸಿ ಅನುದಾನದಲ್ಲಿ ಹಾಗೂ ವಯಕ್ತಿಕವಾಗಿ 5 ಲಕ್ಷ ರೂ. ಸಹಾಯ ನೀಡುವುದಾಗಿ ಸಭೆಯಲ್ಲಿ ಘೋಷಣೆ ಮಾಡಿದರು.

500 ವರ್ಷಗಳ ಇತಿಹಾಸ ಇರುವ ಶ್ರೀ ಆದಿಉಡಸಲಮ್ಮ ದೇವಸ್ಥಾನದ ನೂತನ ಕಟ್ಟಡ ನಿರ್ಮಾಣದ ಕಾಂಗಾರಿಗೆ ಚಾಲನೆ ನೀಡಲು ಆಯೋಜಿಸಿದ್ದ ಪರಕ್ಕೆ ಬೆಳಿಗ್ಗೆ 11 ಗಂಟೆಯಿಂದ ಸಂಜೆ 6 ಗಂಟೆವರೆಗೆ ಅನ್ನಸಂತರ್ಪಣೆ ಮಾಡಲಾಯಿತು. ಈ ವೇಳೆ ಭಕ್ತರು ಸಾಗರದಂತೆ ಹರಿದು ಬಂದು ಪ್ರಸಾದ ಸ್ವೀಕಾರ ಮಾಡಿ ದೇವರ ಕೃಪೆಗೆ ಪಾತ್ರರಾಗುವ ಜೊತೆ–ಗೆ ದೇವಸ್ಥಾನದ ನಿರ್ಮಾಣಕ್ಕೆ ಆರ್ಥಿಕ ಸಹಕಾರ ನೀಡಿದರು.

ಪರದಲ್ಲಿ ರಾಜಕೀಯ ಮುಖಂಡರು ಪಕ್ಷಾತೀತವಾಗಿ ಭಾಗವಹಿಸಿದ್ದರು. ಅಲ್ಲದೆ ಈ ಮಾರ್ಗದ ವಾಹನ ಸಂಚಾರವನ್ನು ಬದಲಾವಣೆ ಮಾಡಿ ಗುಡ್ಡೆತಿಮ್ಮಸಂದ್ರ ಮೂಲಕ ಬೈರಾಪಟ್ಟಣ ಕೆಸ್ತೂರು ಮಾರ್ಗದಲ್ಲಿ ವಾಹನಗಳ ಸಂಚಾರಕ್ಕೆ ಅನುವು ಮಾಡಿಕೊಡಲಾಗಿತ್ತು.


ಪರದಲ್ಲಿ ಗ್ರಾಮದ ಯುವಕರು ಸ್ವಯಂ ಸೇವಕರಾಗಿ ಸೇವೆ ಮಾಡಿ ಭಕ್ತರಿಗೆ ಪ್ರಸಾದ ವಿತರಣೆ ಮಾಡುವಲ್ಲಿ ಶ್ರಮಿಸಿದರು.

ಅಭೂತಪೂರ್ವ ಗೆಲುವು ತಂದುಕೊಟ್ಟ ಮತದಾರರಿಗೆ ಅಭಿನಂದನೆ

ಕಾಯಕಯೋಗಿ ಸುದ್ದಿ

ಕನಕಪುರ: ಬೆಂಗಳೂರು ಗ್ರಾಮಾಂತರ ಲೋಕಸಭಾ ಚುನಾವಣೆಯಲ್ಲಿ ಎನ್ ಡಿ ಎ ಮೈತ್ರಿ ಅಭ್ಯರ್ಥಿ ಡಾ. ಮಂಜುನಾಥ್ ಅಭೂತಪೂರ್ವ ಗೆಲುವು ತಂದುಕೊಟ್ಟ ಮತದಾರರಿಗೆ ತಾಲೂಕು ಬಿಜೆಪಿ ಘಟಕದ ಮುಖಂಡರು ಹಾಗೂ ಕಾರ್ಯಕರ್ತರು ಅಭಿನಂದನೆ ಸಲ್ಲಿಸಿದ್ದಾರೆ.

ಮಂಗಳವಾರ ನಗರದಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ನಗರ ಯೋಜನಾ ಪ್ರಾಧಿಕಾರದ ಮಾಜಿ ಅಧ್ಯಕ್ಷ ಅಚ್ಚಲು ಶಿವರಾಜು ಗ್ರಾಮಾಂತರ ಕ್ಷೇತ್ರದ ಜನತೆ ಏಕ ಪ್ರಭುತ್ವ ಆಡಳಿತದಿಂದ ಬೇಸತ್ತು ಹೃದಯವಂತ ಡಾಕ್ಟರ್ ಮಂಜುನಾಥ್ ರವರಿಗೆ ಅಧಿಕ ಮತದಿಂದ ಗೆಲುವು ತಂದು ಕ್ಷೇತ್ರದ ಅಭಿವೃದ್ಧಿಗೆ ದುಡಿಯಲು ಅನುವು ಮಾಡಿಕೊಟ್ಟಿದ್ದಾರೆ, ಈ ಕ್ಷೇತ್ರದ ಜನತೆಯ ಬಹುದಿನಗಳ ಕನಸಾದ ಬೆಂಗಳೂರು ಚಾಮರಾಜನಗರ ರೈಲು ಮಾರ್ಗದ ಕಾಮಗಾರಿಯನ್ನು



ಪ್ರಾರಂಭಿಸುವುದರ ಮೂಲಕ ಹೊಸ ಯುಗ ಪ್ರಾರಂಭಿಸಬೇಕೆಂದು ತಿಳಿಸಿದ ಅವರು ಗ್ರಾಮೀಣ ಭಾಗದ ಹತ್ತಾರು ಜಲಂತ ಸಮಸ್ಯೆಗಳನ್ನು ನೀಗಿಸುವರೆಂಬ ಭರವಸೆ ಇರುವುದಾಗಿ ತಿಳಿಸಿ ಇವರಿಗೆ ಮತ ನೀಡಿದ ಮತದಾರರಿಗೆ ಗೆಲುವಿಗೆ ದುಡಿದ ಕಾರ್ಯಕರ್ತ ಮುಖಂಡರಿಗೆ ಅಭಿನಂದನೆ ಸಲ್ಲಿಸಿದರು.

ನಗರ ಬಿಜೆಪಿ ಮಾಜಿ ಅಧ್ಯಕ್ಷ ಮುತ್ತಣ್ಣ ಮಾತನಾಡಿ ಕ್ಷೇತ್ರದ ಜನ ಈ ಕ್ಷೇತ್ರದಲ್ಲಿ ದಬ್ಬಾಳಿಕೆ ದೌರ್ಜನ್ಯದ ವಿರುದ್ಧ ಮತ ನೀಡಿದ್ದು ಇನ್ನು ಮುಂದೆ ತಾಲೂಕಿನಲ್ಲಿ ವಿರೋಧ ಪಕ್ಷದವರ ಮೇಲೆ ದಮನ ನೀತಿ ನಡೆಯದು ಎಂದು ತಿಳಿಸಿ, ಬಿಜೆಪಿ ಅಭ್ಯರ್ಥಿಗೆ ಮತ ನೀಡಿದ ತಾಲೂಕಿನ ಮತದಾರರಿಗೆ ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ರಾಮನಗರ ಜಿಲ್ಲಾ ಬಿಜೆಪಿ ಕಾರ್ಯದರ್ಶಿ ಪ್ರಮೀಳಾ ಮೂರ್ತಿ, ದೇವಿಕಾ, ಸವಿತಾ ಮಂಗಳ, ಸೀರೆಗೌಡ, ಚಿಕ್ಕ ಮರಿಗೌಡ, ಶಿವರುದ್ರ , ಯತೀರಾಜ್, ಮುನಿಯಪ್ಪ . ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಭರತ್ ಗೌಡ , ಚೇತನ್, ಸೇರಿದಂತೆ ಇನ್ನು ಮುಂತಾದವರು ಹಾಜರಿದ್ದರು.

ಜುಲೈ 13ರಂದು ರಾಷ್ಟ್ರೀಯ ಲೋಕ ಅದಾಲತ್

ರಾಮನಗರ: ಜಿಲ್ಲೆಯ ನ್ಯಾಯಾಲಯದಲ್ಲಿ ಬಾಕಿ ಇರುವ ಹಾಗೂ ರಾಜಿ ಆಗಬಹುದಾದ ಪ್ರಕರಣಗಳನ್ನು 2024ರ ಜುಲೈ 13 ರಂದು ನಡೆಯಲಿರುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಇತ್ಯರ್ಥಗೊಳಿಸಿಕೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಅಧ್ಯಕ್ಷರಾದ ನ್ಯಾ. ನಿಂಗಪ್ಪ ಪರಶುರಾಮ ಕೋಪರ್ಡೆ ಅವರು ಕರೆ ನೀಡಿದ್ದಾರೆ.

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ರಾಮನಗರ ಜಿಲ್ಲೆಯಾದ್ಯಂತ ಒಟ್ಟು 20 ಬೆಂಚ್‌ಗಳಲ್ಲಿ ಜುಲೈ 13 ರಂದು ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸಲಾಗಿದೆ. ಇಲ್ಲಿ ರಾಜಿ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಅವಕಾಶವಿದೆ. ಸಾರ್ವಜನಿಕರು ಇದರ ಲಾಭ ಪಡೆದುಕೊಳ್ಳಬಹುದಾಗಿದೆ ಎಂದವರು ತಿಳಿಸಿದ್ದಾರೆ. ಜಿಲ್ಲೆಯಾದ್ಯಂತ ಏಕಕಾಲಕ್ಕೆ ಜುಲೈ 13ರಂದು ನಡೆಯುವ ಲೋಕ ಅದಾಲತ್‌ಗಾಗಿ ಜುಲೈ 12ರವರೆಗೆ ಪ್ರಕರಣಗಳನ್ನು ನೋಂದಣಿ ಮಾಡಿಕೊಳ್ಳಲಾಗುತ್ತದೆ. ರಾಮನಗರ ಜಿಲ್ಲಾ ಹಾಗೂ ಅಧೀನ ನ್ಯಾಯಾಲಯಗಳಲ್ಲಿ ಕಲಾಪ ನಡೆಯಲಿದೆ. ನ್ಯಾಯಾಲಯದ ಕಲಾಪಗಳಲ್ಲಿ ವಕೀಲರು ಭಾಗವಹಿಸಬಹುದು, ಅವಶ್ಯಕತೆ ಇದ್ದಲ್ಲಿ ಕಕ್ಷಿದಾರರನ್ನು ಆನ್‌ಲೈನ್ ಮೂಲಕ ಸಂಪರ್ಕಿಸಲಾಗುವುದು. ಜಿಲ್ಲೆಯಲ್ಲಿ ಒಟ್ಟು 53,016 ಪ್ರಕರಣಗಳು ಬಾಕಿ ಇದ್ದು, ಅವುಗಳ ಪೈಕಿ ರಾಜಿಯಾಗಬಹುದಾದ ಎಲ್ಲಾ ಪ್ರಕರಣಗಳನ್ನು ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ರಾಜಿ ಪ್ರಕರಣಗಳನ್ನಾಗಿ ಪರಿಗಣಿಸಿ ಕೈಗೆತ್ತಿಕೊಳ್ಳಲಾಗಿದೆ. ವಕೀಲರು ಖುದ್ದಾಗಿ ಹಾಗೂ ಆನ್‌ಲೈನ್ ಮೂಲಕ ಭಾಗವಹಿಸಲು ಅವಕಾಶ ಮಾಡಿಕೊಡಲಾಗಿದೆ. ಎಲ್ಲರಿಗೂ ನ್ಯಾಯ ದೊರಕಿಸಿ ಕೊಡುವ ಉದ್ದೇಶದಿಂದ ಲೋಕ ಅದಾಲತ್‌ಗೆ ಚಾಲನೆ ನೀಡಲಾಗಿದೆ.

ರಾಜಿಯಾಗಬಲ್ಲ ಕ್ರಿಮಿನಲ್ ಪ್ರಕರಣಗಳು, ನೆಗೋಷಬಲ್ ಇನ್ಸ್ಟ್ರೂಮೆಂಟ್ ಕಾಯಿದೆ (ಎನ್‌ಐ ಆಕ್ಟ್) ಪ್ರಕರಣಗಳು, ಸಾಲ ವಸೂಲಾತಿ ಪ್ರಕರಣಗಳು, ಬ್ಯಾಂಕ್ ಸಾಲ ವಸೂಲಾತಿ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪ್ರಕರಣ, ಕಾರ್ಮಿಕ ವಿವಾದ ಪ್ರಕರಣಗಳು, ಗಣಿ ಮತ್ತು ಭೂ ವಿಜ್ಞಾನ ಪ್ರಕರಣಗಳು, ವೈವಾಹಿಕ ಪ್ರಕರಣಗಳು, ಭೂಸ್ವಾಧೀನ ಪ್ರಕರಣಗಳು, ಆಸ್ತಿ ವಿಭಾಗ ಪ್ರಕರಣಗಳು, ನಿರ್ದಿಷ್ಟ ಪ್ರಕರಣಗಳು, ಜಾರಿ ಪ್ರಕರಣಗಳು, ಹಕ್ಕು ಘೋಷಣೆ, ಶಾಶ್ವತ ನಿರ್ಭಂದಕಾಜ್ಞೆ ಹಾಗೂ ಇತರೆ, ಜನನ ಪ್ರಮಾಣ ಪತ್ರಕ್ಕೆ ಸಂಬಂಧಿಸಿದ ಪ್ರಕರಣಗಳು, ಲಘು ವ್ಯಾಜ್ಯ ಪ್ರಕರಣಗಳು, ಇತರೆ ಕ್ರಿಮಿನಲ್ ಪ್ರಕರಣಗಳು, ಭೂಸ್ವಾಧೀನ ಜಾರಿ ಪ್ರಕರಣಗಳು, ಜೀವನಾಂಶ ಪ್ರಕರಣಗಳು, ಕೌಟುಂಬಿಕ ದೌರ್ಜನ

ಕಾಯಕಯೋಗಿ

05-06-2024
ಬುಧವಾರ

ಎಲ್ಲಾ ಸಮೀಕ್ಷೆಗಳೂ ಸುಳ್ಳಾಗಿವೆ: ಸಿಎಂ

ಮೋದಿ ಮುಖ ನೋಡಿ ಮತ ಹಾಕಿ ಎಂದು ಪ್ರಚಾರ ಮಾಡಿದರೂ ಬಿಜೆಪಿಗೆ ಬಹುಮತ ಬಂದಿಲ್ಲ: ಇದು ಮೋದಿಯ ಸೋಲು

ರಾಮನ-ರಾಮ ಮಂದಿರದ ಹೆಸರಲ್ಲೂ ಮತ ಕೇಳಿದ್ದರು: ಅಯೋಧ್ಯೆಯಲ್ಲೇ ಬಿಜೆಪಿ ಹೀನಾಯವಾಗಿ ಸೋತಿದೆ

ರಾಹುಲ್ ಗಾಂಧಿಯವರನ್ನು ದೇಶದ ಜನ ಒಪ್ಪಿಕೊಂಡಿದ್ದಾರೆ, ಸ್ವೀಕರಿಸಿದ್ದಾರೆ

ಕಾಯಕಯೋಗಿಸುದ್ದಿ

ಬೆಂಗಳೂರು: ಚುನಾವಣಾ ಫಲಿತಾಂಶದ ಬಳಿಕ ಗೃಹ ಕಚೇರಿ ಕೃಷ್ಣಾದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ರಾಜ್ಯದಲ್ಲಿ ನಮ್ಮ ನಿರೀಕ್ಷೆಗೆ ತಕ್ಕಂತೆ ಸ್ಥಾನಗಳನ್ನು ಗೆಲ್ಲಲು ಸಾಧ್ಯವಾಗಿಲ್ಲ. 15-20 ಸ್ಥಾನ ನಮ್ಮ ನಿರೀಕ್ಷೆಯಾಗಿತ್ತು. ಆದರೆ, 2019 ರಲ್ಲಿ ಕೇವಲ ಒಂದು ಸ್ಥಾನದಲ್ಲಿ ಗೆದ್ದಿದ್ದೆವು. ಈಗ 9 ಕ್ಕೆ ಏರಿದ್ದೇವೆ. ಈ ಬಾರಿ ನಮಗೆ ಶೇ 45.34, ಬಿಜೆಪಿ ಶೇ 46.04 ರಷ್ಟು ಮತ ಪಡೆದಿದೆ. 2019 ರಲ್ಲಿ ಬಿಜೆಪಿ ಶೇ 51.38 ರಷ್ಟು ಮತ ಗಳಿಸಿತ್ತು. ನಮಗೆ ಶೇ31.88 ರಷ್ಟು ಮಾತ್ರ ಮತಗಳು ಬಂದಿದ್ದವು. 2019 ಕ್ಕೆ ಹೋಲಿಸಿದರೆ ನಮ್ಮ ಮತ ಪ್ರಮಾಣ ಹೆಚ್ಚಾಗಿದೆ. ಬಿಜೆಪಿ ಮತ ಪ್ರಮಾಣ ಶೇ5 ರಷ್ಟು ಕುಸಿದಿದೆ. ಜೆಡಿಎಸ್ ಜೊತೆ ಹೊಂದಾಣಿಕೆ ಬಳಿಕವೂ ಅವರ ಮತ ಪ್ರಮಾಣದಲ್ಲಿ ಇಳಿಕೆಯಾಗಿದೆ. ಜೆಡಿಎಸ್ ಕೂಡ 2019ಕ್ಕಿಂತ ಕಡಿಮೆ ಪ್ರಮಾಣದ ಮತ ಪಡೆದಿದೆ. ಆದರೂ ನಾವು ನಿರೀಕ್ಷಿತ ಪ್ರಮಾಣದಲ್ಲಿ ಸೀಟು ಗೆದ್ದಿಲ್ಲ. ರಾಷ್ಟ್ರಮಟ್ಟದಲ್ಲಿ ಕಾಂಗ್ರೆಸ್ ಮತ ಪ್ರಮಾಣ ಹೆಚ್ಚಾಗಿದೆ. ಕೇಂದ್ರದಲ್ಲಿ ಅಧಿಕಾರದಲ್ಲಿದ್ದ ಬಿಜೆಪಿ ಮೋದಿ ಮುಖ 2014-2019 ಕ್ಕಿಂತ ಕಡಿಮೆ ಸೀಟು ಕಡಿಮೆ ಗಳಿಸಿದ್ದಾರೆ. ಮೋದಿ ಮುಖ ನೋಡಿಯೂ



ಬಿಜೆಪಿಗೆ ಬಹುಮತ ಬಂದಿಲ್ಲ. ಯಾವ ಪಕ್ಷಕ್ಕೂ ಬಹುಮತ ಬಂದಿಲ್ಲ ಎಂದರು.

ಬಿಜೆಪಿ ಸರಳ ಬಹುಮತ ಪಡೆಯುವಲ್ಲೂ ಸೋತಿದೆ. ದೇಶದಲ್ಲಿ ಎಲ್ಲೂ ಮೋದಿಯವರ ಅಲೆ ಕಾಣಲಿಲ್ಲ. ಹೀಗಾಗಿ ಈ ಫಲಿತಾಂಶ ಮೋದಿ ಜನಪ್ರಿಯತೆ ನೆಲಕಚ್ಚಿದೆ ಎನ್ನುವುದು ಮೇಲು ನೋಟಕ್ಕೆ ಗೊತ್ತಾಗಿದೆ. ಸರ್ಕಾರ ಯಾರು ಮಾಡ್ತಾರೆ ಎಮ್ನುವುದು ಈಗಲೇ ಹೇಳಲು ಸಾಧ್ಯವಿಲ್ಲ ಎಂದರು.

ಮೋದಿಯವರು ಚುನಾವಣೆಯ ಕೊನೆ ಕೊನೆಗೆ ಧರ್ಮ, ದೇವರ ಹೆಸರಲ್ಲಿ ಮತ ಕೇಳಿ ನೇರವಾಗಿ ಇತರೆ ಧರ್ಮೀಯರ ವಿರುದ್ಧ ಭಾಷಣ ಮಾಡಿದರು, ಹಿಂದುಳಿದವರ ಮೀಸಲಾತಿ ಕಾಂಗ್ರೆಸ್ ಕಿತ್ತುಕೊಳ್ಳುತ್ತದೆ ಎಂದು ಸುಳ್ಳು ಹೇಳಿಕೊಂಡು ತಿರುಗಿದರೂ ಮೋದಿಯವರಿಗೆ ಬಹುಮತ ಬರಲಿಲ್ಲ. ಓಆಂ ಕಳೆದ ಬಾರಿಗಿಂತ 64 ಸ್ಥಾನ ಕಳೆದುಕೊಂಡಿದೆ. ಇದು ರಾಷ್ಟ್ರ ಮಟ್ಟದಲ್ಲಿ ಬಿಜೆಪಿಯ ಸೋಲು ಎಂದರು.

ಈ ಸೋಲಿನ ಕಾರಣದಿಂದ ಮೋದಿಯವರಿಗೆ ಮತ್ತೆ ಪ್ರಧಾನಿ ಆಗುವ ನೈತಿಕ ಹಕ್ಕಿಲ್ಲ . ವಿರೋಧ ಪಕ್ಷದ ನಾಯಕರು, ಮುಖ್ಯಮಂತ್ರಿಗಳನ್ನು ಜೈಲಿಗೆ ಹಾಕಿದರು. ಇಆ, ಖಖಿ, ಅಃಖ ಹೆಸರಲ್ಲಿ ಹೆದರಿಸಿದರು, ಬೆದರಿಸಿದರು ಆದರೂ ದೇಶದ ಜನ ಬಿಜೆಪಿಗೆ ಬಹುಮತ ಕೊಡಲಿಲ್ಲ.

ರಾಮನ ಹೆಸರಲ್ಲಿ, ರಾಮ ಮಂದಿರದ ಹೆಸರಲ್ಲಿ ಅಯೋಧ್ಯೆಯಲ್ಲೂ ಬಿಜೆಪಿ ಸೋತಿದೆ. ಇದು ಬಿಜೆಪಿಯ ಸೋಲು ಎಂದರು.

ರಾಹುಲ್ ಗಾಂಧಿಯನ್ನು ದೇಶ ಒಪ್ಪಿಕೊಂಡಿದೆ

ರಾಹುಲ್ ಗಾಂಧಿಯವರ ಎರಡು ಯಾತ್ರೆಗಳು ಫಲ ನೀಡಿವೆ. ಕಾಂಗ್ರೆಸ್ ಮತ್ತು ರಾಹುಲ್ ಗಾಂಧಿಯವರನ್ನು ದೇಶದ ಜನತೆ ಬಹಳ ದೊಡ್ಡ ಮಟ್ಟದಲ್ಲಿ ಒಪ್ಪಿಕೊಂಡಿದ್ದಾರೆ. ಎರಡೂ ಕ್ಷೇತ್ರಗಳಲ್ಲೂ ರಾಹುಲ್ ಗಾಂಧಿ ಭರ್ಜರಿ ಮತಗಳಿಂದ ಗೆದ್ದಿದ್ದಾರೆ. ಅವರಿಗೆ ಅಭಿನಂದಿಸುತ್ತೇನೆ ಎಂದರು.

ಕೈಯಲ್ಲಿ ಸಂವಿಧಾನ ಹಿಡಿದೇ ರಾಹುಲ್ ಗಾಂಧಿಯವರು ಇಡೀ ದೇಶದಲ್ಲಿ ಚುನಾವಣಾ ಪ್ರಚಾರ ಮಾಡಿದರು. ದೇಶದ ಜನ ಸಂವಿಧಾನದ ಉಳಿವಿಗೆ, ಪ್ರಜಾಪ್ರಭುತ್ವ ಉಳಿವಿಗಾಗಿ ರಾಹುಲ್ ಗಾಂಧಿಯವರ ಕೈ ಹಿಡಿದಿದ್ದಾರೆ ಎಂದರು.

ಸರ್ಕಾರದ ಗ್ಯಾರಂಟಿ ಯೋಜನೆಗಳ ಪರಿಣಾಮ ಏನಾಗಿದೆ ಎನ್ನುವ ಬಗ್ಗೆ ವಿಶ್ಲೇಷಣೆ ನಡೆಯಬೇಕಿದೆ.

ಇಡೀ ದೇಶದಲ್ಲಿ ಕಾಂಗ್ರೆಸ್ ಮತ ಪ್ರಮಾಣ ಹೆಚ್ಚಾಗಿದೆ. ರಾಜ್ಯದಲ್ಲಿ ಬಿಜೆಪಿ ಹೆಚ್ಚು ಸ್ಥಾನ ಗೆದ್ದಿದ್ದರೂ ಬಿಜೆಪಿ ಮತ ಪ್ರಮಾಣ ಕುಸಿದಿದೆ. ಕಾಂಗ್ರೆಸ್ ಕಡಿಮೆ ಸೀಟು ಗೆದ್ದರೂ ಮತ ಪ್ರಮಾಣ ಹೆಚ್ಚಾಗಿದೆ ಎಂದು ಅಂಕಿ ಅಂಶಗಳ ಸಮೇತ ವಿವರಿಸಿದರು.

ಬಿಜೆಪಿ ಜನಪ್ರಿಯತೆ ಕುಸಿದಿದೆ

ಇಡೀ ದೇಶದಲ್ಲಿ, ರಾಜ್ಯದಲ್ಲಿ 2019 ಕ್ಕಿಂತ ಬಿಜೆಪಿ ಪ್ರಭಾವ ವಿಪರೀತ ಕುಸಿದಿದೆ ಎಂದು ವಿವರಿಸಿದರು.

ಕೇಂದ್ರದಲ್ಲಿ ಯಾರು ಸರ್ಕಾರ ರಚಿಸುತ್ತಾರೆ ಎನ್ನುವುದು ಅನಿಶ್ಚಿತವಾಗಿದೆ ಎಂದರು.



ಮೈಸೂರು ಕೊಡಗು ಲೋಕಸಭಾ ಕ್ಷೇತ್ರದ ವಿಜೇತ ಅಭ್ಯರ್ಥಿ ಬಿಜೆಪಿ ಪಕ್ಷದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರಿಗೆ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಡಾ ಕೆ.ವಿ.ರಾಜೇಂದ್ರ ಅವರು ಪ್ರಮಾಣ ಪತ್ರ ವಿತರಿಸಿದರು.



ಮಂಡ್ಯ ಜಿಲ್ಲೆಯ ನೂತನ ಲೋಕಸಭಾ ಸದಸ್ಯ ಹಾಗೂ ಮಾಜಿ ಮುಖ್ಯ ಮಂತ್ರಿ ಹೆಚ್.ಡಿ.ಕುಮಾರಸ್ವಾಮಿ.ಜಿಲ್ಲಾಧಿಕಾರಿ. ಹಾಗೂ ಚುನಾವಣಾಧಿಕಾರಿಯಾದ ಡಾ.ಕುಮಾರ್ ರವರ ಹಸ್ತ ದಿಂದ ಪ್ರಮಾಣ ಪತ್ರ ಸ್ವೀಕರಿಸಿದರು.

ಹೆಚ್.ಡಿ.ಕುಮಾರಸ್ವಾಮಿ ಗೆಲುವು: ಕಾರ್ಯಕರ್ತರ ಸಂಭ್ರಮ




ಕಾಯಕಯೋಗಿಸುದ್ದಿ

ನಾಗಮಂಗಲ: ಮಂಡ್ಯ ಲೋಕಸಭಾ ಚುನಾವಣೆಯಲ್ಲಿ ಜೆಡಿಎಸ್ ಬಿಜೆಪಿ ಮೈತ್ರಿ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಅವರು 2.84 ಲಕ್ಷಕ್ಕೂ ಅಧಿಕ ಮತಗಳ ಅಂತರದಿಂದ ಭರ್ಜರಿ ಗೆಲುವು ಸಾಧಿಸಿದ ಹಿನ್ನಲೆಯಲ್ಲಿ ನಾಗಮಂಗಲ ಮತ್ತು ಬೆಳ್ಳೂರು ಪಟ್ಟಣ ಸೇರಿದಂತೆ ತಾಲೂಕಿನಾದ್ಯಂತ ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ತೀವ್ರ ಕುತೂಹಲದೊಂದಿಗೆ ದೇಶದ ಗಮನಸೆಳೆದಿದ್ದ ಮಂಡ್ಯ ಲೋಕಸಭಾ ಚುನಾವಣೆಯ ಮತ ಎಣಿಕೆ ಕಾರ್ಯದ ಆರಂಭದಿಂದಲೂ ಮೈತ್ರಿ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಮುನ್ನಡೆ ಕಾಯ್ದುಕೊಂಡಿದ್ದ ಮಾಹಿತಿ ಸಿಗುತ್ತಿದ್ದಂತೆ ತಾಲೂಕಿನ ಜೆಡಿಎಸ್ ಮತ್ತು ಬಿಜೆಪಿ ಪಕ್ಷದ ಕಾರ್ಯಕರ್ತರಲ್ಲಿ ಸಂಭ್ರಮ ಮನೆಮಾಡಿತ್ತು. ಪಟ್ಟಣದ ಚಾಮರಾಜನಗರ-ಜೇವರ್ಗಿ ರಾಷ್ಟ್ರೀಯ ಹೆದ್ದಾರಿಯ ಮಂಡ್ಯ ವೃತ್ತ, ಟಿ.ಮರಿಯಪ್ಪ ಸರ್ಕಲ್, ಟಿ.ಬಿ.ಬಡಾವಣೆಯ ಬಿಜಿಎಸ್ ವೃತ್ತ ಸೇರಿದಂತೆ ಹಲವೆಡೆ ಪಟಾಕಿ ಸಿಡಿಸಿದ ಮೈತ್ರಿ ಪಕ್ಷದ ಕಾರ್ಯಕರ್ತರು ಪ್ರಧಾನಿ ನರೇಂದ್ರಮೋದಿ, ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಹಾಗೂ ವಿಜೇತ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಮತ್ತು ಮಾಜಿ ಶಾಸಕ ಸುರೇಶ್‌ಗೌಡ ಪರ ಜಯಘೋಷ ಮೊಳಗಿಸಿದರಲ್ಲದೆ ಹಿಡಿದು ಬೈಕ್ ಮತ್ತು ಕಾರಿನಲ್ಲಿ ರ‍್ಯಾಲಿ ನಡೆಸಿ ವಿಜಯೋತ್ಸವ ಆಚರಿಸಿದರು. ಈ ಸಂದರ್ಭ ಕೇಸರಿ ಶಾಲು ಧರಿಸಿ ಜೈಶ್ರೀರಾಮ್ ಎಂಬ ಘೋಷಣೆ ಕೂಗಿ ಸಂಭ್ರಮಿಸಿದರು. ತಾಲೂಕಿನ ಬೆಳ್ಳೂರು, ಬಿಂಡಿಗನವಿಲೆ, ಕಸಬಾ, ಹೊಣಕೆರೆ ಹಾಗೂ ದೇವಲಾಪುರ ಹೋಬಳಿಯ ಬಹುತೇಕ ಗ್ರಾಮಗಳಲ್ಲಿ ಹಾಗೂ ಪುರಸಭೆ ವ್ಯಾಪ್ತಿಯ ಉಪ್ಪಾರಹಳ್ಳಿಯಲ್ಲಿ ಪಟಾಕಿ ಸಿಡಿಸಿ, ಸಾರ್ವಜನಿಕರಿಗೆ ಸಿಹಿ ವಿತರಣೆ ಮಾಡುವ ಮೂಲಕ ವಿಜಯೋತ್ಸವ ಆಚರಿಸಿದ ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು, ನೂತನ ಸಂಸದ ಎಚ್.ಡಿ.ಕುಮಾರಸ್ವಾಮಿ ಪರ ಜಯಘೋಷ ಮೊಳಗಿಸಿ ಸಂಭ್ರಮಿಸಿದರು.

ಸಿಆರ್‌ಎಸ್ ಮತ್ತು ಸ್ಟಾರ್‌ಚಂದ್ರು ಸ್ವಗ್ರಾಮಗಳಲ್ಲಿ ಜೆಡಿಎಸ್ ಲೀಡ್:

ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಅವರು ಲೋಕಸಭಾ ಚುನಾವಣೆಯನ್ನು ಬಾರಿ ಪ್ರತಿಷ್ಠೆಯಾಗಿ ತೆಗೆದು-ಕೊಂಡಿದ್ದರೂ ಕೂಡ ತಮ್ಮ ಪಕ್ಷದ ಅಭ್ಯರ್ಥಿ ಸೋಲು ಅನುಭವಿಸಿದ್ದಾರೆ. ಇದಕ್ಕಿಂತ ಮಿಗಿಲಾಗಿ ಸಚಿವರ ಸ್ವಗ್ರಾಮ ತಾಲೂಕಿನ ಹೊಣಕೆರೆ ಹೋಬಳಿಯ ಇಜ್ಜಲಘಟ್ಟ ಹಾಗೂ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ(ಸ್ಟಾರ್‌ಚಂದ್ರು) ಅವರ ಸ್ವಗ್ರಾಮ ಕನ್ನಾಘಟ್ಟದ ಬೂತ್‌ಗಳಲ್ಲಿಯೂ ನೂರಕ್ಕೂ ಹೆಚ್ಚು ಮತಗಳ ಲೀಡ್‌ಅನ್ನು ಮೈತ್ರಿ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಪಡೆದಿರುವುದು ವಿಶೇಷವಾಗಿದೆ.



ಕಾಂಗ್ರೆಸ್‌ನ 6 ಸಚಿವರ ಮಕ್ಕಳಲ್ಲಿ ಮೂವರಿಗೆ ಗೆಲುವು

ಕಾಯಕಯೋಗಿಸುದ್ದಿ

ಬೆಂಗಳೂರು: ಕರ್ನಾಟಕ ಲೋಕಸಭಾ ಚುನಾವಣೆ ಫಲಿತಾಂಶ ಪ್ರಕಟವಾಗಿದ್ದು, ಕಾಂಗ್ರೆಸ್‌ನ ಆರು ಸಚಿವರ ಮಕ್ಕಳಿಗೆ ಟಿಕಟ್ ಘೋಷಿಸಲಾಗಿತ್ತು. ಈ ಪೈಕಿ ಮೂವರು ಸಚಿವ ಮಕ್ಕಳು ಗೆಲುವು ಸಾಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಚಿಕ್ಕೋಡಿ ಕ್ಷೇತ್ರದಲ್ಲಿ ಸಚಿವ ಸತೀಶ್ ಜಾರಕಿಹೊಳಿ ಪುತ್ರಿ ಪ್ರಿಯಾಂಕಾ ಜಾರಕಿಹೊಳಿ ಅವರು ಬಿಜೆಪಿ ಅಭ್ಯರ್ಥಿ ಅಣ್ಣಾ ಸಾಹೇಬ್ ಜೊಲ್ಲೆ ಅವರನ್ನು ಸೋಲಿಸುವ ಮೂಲಕ ಗೆಲುವಿನ ನಗೆ ಬೀರಿದ್ದಾರೆ. ಈ ಮೂಲಕ ಮೊದಲ ಬಾರಿಗೆ ಸಂಸತ್ ಪ್ರವೇಶಿಸುತ್ತಿದ್ದಾರೆ.

ಬೆಳಗಾವಿ ಕ್ಷೇತ್ರದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪುತ್ರ ಮೃಣಾಲ್ ಹೆಬ್ಬಾಳ್ಕರ್ ಸೋಲು ಕಂಡಿದ್ದಾರೆ. ಕಾಂಗ್ರೆಸ್ ತೊರೆದು ಮರಳಿ ಬಿಜೆಪಿ ಸೇರಿದ್ದ ಮಾಜಿ ಸಿಎಂ ಜಗದೀಶ್ ಶೆಟ್ಟರ್ ಇಲ್ಲಿ ಗೆಲುವು ಸಾಧಿಸಿದ್ದಾರೆ.

ಬಾಗಲಕೋಟೆ ಕ್ಷೇತ್ರದಲ್ಲಿ ಸಚಿವ ಶಿವಾನಂದ ಪಾಟೀಲ್ ಪುತ್ರಿ ಸಂಯುಕ್ತಾ ಪಾಟೀಲ್ ಸೋಲು ಅನುಭವಿಸಿದ್ದಾರೆ.

ಪ್ರತಿಸ್ಪರ್ಧಿ ಬಿಜೆಪಿ ಗೆಲುವಿನ ಸರ್ದಾರ ಪಿ ಸಿ ಗದ್ದಿಗೌಡರ್ ಮತ್ತೆ ಗೆಲುವಿನ ನಗೆ ಬೀರಿದ್ದಾರೆ.

ಬೀದರ್ ಕ್ಷೇತ್ರದಲ್ಲಿ ಸಚಿವ ಈಶ್ವರ್ ಖಂಡ್ರೆ ಪುತ್ರ ಸಾಗರ್ ಖಂಡ್ರೆ ಅವರು ಗೆಲುವು ಸಾಧಿಸಿದ್ದು, ರಾಜ್ಯದ ಕಿರಿಯ ಸಂಸದ ಎಂಬ ಹೆಗ್ಗಳಿಕೆಗೂ ಪಾತ್ರರಾಗಿದ್ದಾರೆ. ಬಿಜೆಪಿಯ ಭಗವಂತ ಖೂಬಾ ಸೋಲು ಅನುಭವಿಸಿದ್ದಾರೆ.

ಚಾಮರಾಜನಗರ ಎಸ್‌ಸಿ ಮೀಸಲು ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿದ್ದ ಸಚಿವ ಹೆಚ್ ಸಿ ಮಹದೇವಪ್ಪ ಪುತ್ರ ಸುನೀಲ್ ಬೋಸ್ ಗೆಲುವು ಸಾಧಿಸಿ ಮೊದಲ ಬಾರಿಗೆ ಸಂಸತ್ ಪ್ರವೇಶಿಸುತ್ತಿದ್ದಾರೆ. ಬಿಜೆಪಿ ಅಭ್ಯರ್ಥಿ ಎಸ್ ಬಾಲರಾಜ್ ಸೋಲು ಕಂಡಿದ್ದಾರೆ.

ಬೆಂಗಳೂರು ದಕ್ಷಿಣ ಕೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿದ್ದ ಸಚಿವ ರಾಮಲಿಂಗಾರೆಡ್ಡಿ ಅವರ ಪುತ್ರಿ ಸೌಮ್ಯಾ ರೆಡ್ಡಿ ಸೋಲು ಕಂಡಿದ್ದಾರೆ. ಬಿಜೆಪಿ ಅಭ್ಯರ್ಥಿ ತೇಜಸ್ವಿ ಸೂರ್ಯ ಎರಡನೇ ಅವಧಿಗೆ ಗೆಲುವು ಸಾಧಿಸಿ ಸಂಸತ್ ಪ್ರವೇಶಿಸುತ್ತಿದ್ದಾರೆ.

ಮಂಡ್ಯ ಜಿಲ್ಲೆಯ ಜನತೆಯ ಗೆಲುವು: ಎಚ್‌ಡಿಕೆ ಹರಕೆಯ ಕುರಿ ಯಾರು: ಸಿದ್ದುಗೆ ತಿರುಗೇಟು

ಕಾಯಕಯೋಗಿಸುದ್ದಿ

ಮಂಡ್ಯ: ನನ್ನ ಅಭೂತಪೂರ್ವ ಗೆಲುವಿಗೆ ಮಂಡ್ಯ ಜಿಲ್ಲೆಯ ಜನತೆಯೇ ಕಾರಣರಾಗಿದ್ದಾರೆ. ಬಿಜೆಪಿ ಹಾಗೂ ಜೆಡಿಎಸ್ ಪಕ್ಷದ ಕಾರ್ಯಕರ್ತರ ಅವಿರತಶ್ರಮದಿಂದ ಅತ್ಯಧಿಕ ಮತಗಳಲ್ಲಿ ಗೆಲುವು ಸಾಧಿಸಿದ್ದೇನೆ ಎಂದು ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಹೇಳಿದರು.

ಮಂಡ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಲೋಕಸಭಾ ಚುನಾವಣೆಯಲ್ಲಿ ಬೆಂಗಳೂರು ಗ್ರಾಮಾಂತರದಲ್ಲಿ ಡಾ.ಮಂಜುನಾಥ್ ಗೆಲುವು ಕುರಿತಾಗಿ ಪ್ರತಿಕ್ರಿಯಿಸಿದ್ದು, ಡಾ.ಮಂಜುನಾಥ್ ನ ಹರಕೆ ಕುರಿ ಮಾಡಿದ್ದಾರೆ ಎಂದಿದ್ದರೂ.ಇವತ್ತು ಯಾರು ಹರಕೆ ಕುರಿಯಾಗಿದ್ದಾರೆ ಎಂಬುದು ಫಲಿತಾಂಶದಿಂದ ತಿಳಿದಿದೆ. ಡಿ.ಕೆ.ಸುರೇಶ್ ರ 2019 ರ ಗೆಲುವಿಗೆ ಜೆಡಿಎಸ್ ಕಾರಣ.ಜೆಡಿಎಸ್ ಸಹಕಾರವೇ ಅವರ ಹಿಂದಿನ ಎರಡು ಗೆಲುವಿಗೆ ಕಾರಣ. ನಮ್ಮ ಪಕ್ಷವನ್ನ ಸರ್ವ ನಾಶ ಮಾಡಲು ಹೊರಟಿದ್ದರು.ಅದಕ್ಕೆ ಇಂದು ಜನರು ಉತ್ತರ ಕೊಟ್ಟಿದ್ದಾರೆ ಎಂದರು

ಮಂಡ್ಯದಲ್ಲಿ ನೂತನ ಸಂಸದ ಕುಮಾರಸ್ವಾಮಿ ಸುದಿಗೋಷ್ಠಿಯಲ್ಲಿ ಮಾತನಾಡಿ,ಇದು ನನ್ನ ಗೆಲುವಲ್ಲ, ಮಂಡ್ಯ ಜಿಲ್ಲೆ ಜನರ ಗೆಲುವು. ನಾನು ಈ ಚುನಾವಣೆಯಲ್ಲಿ ಪ್ರಚಾರ ಮಾಡಿಲ್ಲ. ಎರಡು ಪಕ್ಷದ ನಾಯಕರು, ಕಾರ್ಯಕರ್ತರ ಶ್ರಮದಿಂದ ಗೆಲುವು ಕಂಡಿದ್ದೇನೆ.ಈ ಜಿಲ್ಲೆಯ ಜನರು ಋಣ ನಾನು ಹೊತ್ತಿದ್ದೇನೆ.

ಭಗವಂತ ಕೊಟ್ಟ ಅವಕಾಶವನ್ನ ಬಳಸಿಕೊಂಡು ಸಮಸ್ಯೆ ಪರಿಹಾರ ಮಾಡಲು ಪ್ರಯತ್ನಿಸುತ್ತೇನೆ.



ಜನರ ನಿರೀಕ್ಷೆಗಳನ್ನ ಈಡೇರಿಸಲು ಪ್ರಾಮಾಣಿಕ ಪ್ರಯತ್ನ ಮಾಡ್ತೇನೆ. ಎಲ್ಲ ಫ್ಯಾಕ್ಟರ್ ವರ್ಕ್ ನಿಂದ ಗೆಲುವು ಸಿಕ್ಕಿದೆ.ಪಕ್ಷಾತೀತವಾಗಿ ನನ್ನನ್ನ ಗೆಲ್ಲಿಸಿದ್ದಾರೆ. ಬೇರೆ ಪಕ್ಷದ ಮುಖಂಡರು ಸಹಕರಿಸಿದ್ದಾರೆ.ಅವರ ನಿರೀಕ್ಷೆ ಹುಸಿಯಾಗಲ್ಲ ಎಂದು ಅವರು ತಿಳಿಸಿದರು.

ಸಿಎಂ ವಿರುದ್ಧ ಕುಮಾರಸ್ವಾಮಿ ಕಿಡಿ. ಸೂರ್ಯ ಚಂದ್ರು ಹುಟ್ಟೋದು ಎಷ್ಟು ಸತ್ಯನೋ, ಕುಮಾರಸ್ವಾಮಿ ಸೋಲೋದು ಅಷ್ಟೇ ಸತ್ಯ ಅಂತಿದ್ರು. ಇವಾಗ ಸೂರ್ಯ ಚಂದ್ರ ಹುಟ್ಟೋಕೆ ಸರ್ಕಾರ ಆದೇಶ ಕೊಡುತ್ತೋ, ಇಲ್ವೋ?ಮಂಡ್ಯದಲ್ಲಿ ಸಿಎಂ ಸಿದ್ದರಾಮಯ್ಯ ನೂತನ ಸಂಸದ ಕುಮಾರಸ್ವಾಮಿ ಟಾಂಗ್ ನೀಡಿದರು. ಮಂಡ್ಯ, ರಾಮನಗರ ಜನ ರಾಜಕೀಯವಾಗಿ ಶಕ್ತಿ ತುಂಬಿದ್ದಾರೆ. ಕೇಂದ್ರದಿಂದ ರಾಜ್ಯದ ನಿರೀಕ್ಷೆಗಳನ್ನ ಕಾರ್ಯರೂಪಕ್ಕೆ ತರಲಾಗುವುದು.

ನನಗೆ ದೊಡ್ಡ ಅಂತರದ ಗೆಲುವಿನ ನಿರೀಕ್ಷೆ ಇತ್ತು. ಆದ್ದರಿಂದಲೇ ನಾನು ಇಲ್ಲಿ ಠಿಕಾಣಿ ಹೂಡಲಿಲ್ಲ.ರಾಜ್ಯದ ಎಲ್ಲ ಕ್ಷೇತ್ರವನ್ನ ಸುತ್ತಿದ್ದೇನೆ.ರಾಮನಗರ, ಚನ್ನಪಟ್ಟಣದ ರೀತಿ ಮಂಡ್ಯ ಜಿಲ್ಲೆಯ ನಾಯಕರು ಜವಾಬ್ದಾರಿ ನಿರ್ವಹಿಸಿದ್ದಾರೆ.ನನ್ನನಿರೀಕ್ಷೆ 25 ಸ್ಥಾನ ಗೆಲ್ಲುವ ಗುರಿ ಇತ್ತು. ಆದರೇ 19 ಬಂದಿರೋದು ನೋವು ತಂದಿದೆ.

ನಾಳೆ ದೆಹಲಿ ಸಭೆಗೆ ಆಹ್ವಾನಿಸಿದ್ದಾರೆ. ಕೇಂದ್ರ ಮಂತ್ರಿಯಾಗ್ತೀರಾ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ನಾನು ಮಂತ್ರಿಯಾಗುವುದು ಮುಖ್ಯವಲ್ಲ. ಜಿಲ್ಲೆಯ ಸಮಸ್ಯೆಗಳಿಗೆ ಪರಿಹಾರ ಮೊದಲ ಆದ್ಯತೆ ನೀಡುತ್ತೇನೆ.ಕಾವೇರಿ ಸಮಸ್ಯೆ ಬಗೆಹರಿಸುತ್ತಾರಾ ಎಂಬ ವಿಚಾರವಾಗಿ ಮಾತನಾಡಿದ ಅವರು, ಬ್ರೀಟಿಷರ ಕಾಲದಿಂದಲೂ ಕಾವೇರಿ ಸಮಸ್ಯೆ ಇದೆ.ಶಾಶ್ವತ ಪರಿಹಾರಕ್ಕೆ ಪ್ರಯತ್ನ ಪಡುತ್ತೇನೆ.

ಎನ್ ಡಿಎ ಸರ್ಕಾರ ರಚನೆಗೆ ಸಮಸ್ಯೆ ಇಲ್ಲ.ಹಾಸನದಲ್ಲಿ ಜೆಡಿಎಸ್‌ಗೆ ಸೋಲು ವಿಚಾರವಾಗಿ ಮುಂದಿನ ಬಾರಿ ಗೆಲ್ಲುತ್ತೇವೆ ಬಿಡಿ.

ಮಂಡ್ಯ ಗೆಲುವಿನಿಂದ ಚನ್ನಪಟ್ಟಣ ಕ್ಷೇತ್ರ ತೆರವು ವಿಚಾರ. ಇಡೀ ಕರ್ನಾಟಕ ನನ್ನ ಕರ್ಮ ಭೂಮಿ.ಪಕ್ಷದ ಕಾರ್ಯಕರ್ತರ ಜೊತೆ ಕುಳಿತು ಚರ್ಚೆ ಮಾಡಿ ನಿರ್ಧಾರ ಕೈಗೊಳ್ಳಲಾಗುತ್ತದೆ ಎಂದರು. ಗೋಷ್ಠಿಯಲ್ಲಿ ಮಾಜಿ ಸಚಿವರಾದ ಸಿ.ಎಸ್.ಪುಟ್ಟರಾಜು, ಡಿ.ಸಿ.ತಮ್ಮಣ್ಣ, ಮಾಜಿ ಶಾಸಕ ರವೀಂದ್ರ, ಶಾಸಕ ಎಚ್.ಟಿ.ಮಂಜು ಮತ್ತಿತರರಿದ್ದರು.

ದೇಶದಲ್ಲಿ ಮತ್ತ